ಸಂಪುಟ : 9 ಸಂಚಿಕೆ 194 ಪುಟ : 4 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 10 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 194 Pages : 4 Price : 3.00 Tuesday september 10 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




### ಮಗನ ಮುಗ್ಧ ಭಾವಕ್ಕೆ ಶರಣಾದ ಪಾಲಕರು | ಮುಸ್ಲಿಂ ಬಾಂಧವನ ಮನೆಯಲ್ಲಿ ಗಣಪನ ಪ್ರತಿಷ್ಠಾಪನೆ

# 'ದೇವನೊಬ್ಬ–ನಾಮ ಹಲವು'

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಸೂರಣಗಿ ಗ್ರಾಮದ ಮುಸ್ಲಿಂ ಧರ್ಮದ ಮುಸ್ತಾಫ್ ಮಾಬುಸಾಬ್ ಕೋಲ್ಕಾರ ಗಣೇಶ ಚತುರ್ಥಿ ದಿನ ಹಿಂದೂ ಸಂಪ್ರದಾಯದಂತೆ ಗಣೇಶನ ಮೂರ್ತಿ ಪ್ರತಿಷ್ಠಾಪಿಸಿ ಭಾವೈಕ್ಯತೆ ಸಾರಿದ್ದಾರೆ. ಮುಸ್ತಾಫ್ ಮತ್ತು ಯಾಸ್ಮಿನಾಬಾನು ದಂಪತಿಗಳಿಗೆ ಐದು ಜನ ಮಕ್ಕಳು. ಅವರ ಕೊನೆಯ ಮಗ 3 ವರ್ಷದ ಹಜರತಲಿಗೆ ಗಣೇಶನೆಂದರೆ ಬಹಳ

> ಮಗ ಹಜರತಲಿಗೆ ಗಣೇಶನ ಮೂರ್ತಿಯೆಂದರೆ ತುಂಬಾ ಇಷ್ಟ. ಅಂಗನವಾಡಿಯಲ್ಲೂ ರಾಷ್ಟ್ರೀಯ ಹಬ್ಬದ ದಿನ ಹಿಂದೂ ದೇವರ ವೇಷಭೂಷಣ ತೊಡಿಸಿದ್ದೆವು. ಮಕ್ಕಳು ದೇವರ ಸಮಾನ ಅಂತಾರೆ. ದೇವರೇ ಮನೆಗೆ ಬಂದಂತಾಗಿದ್ದು ಶ್ರದ್ಧೆ, ಭಕ್ತಿ, ಸಂಭ್ರಮದಿಂದ ಗಣೇಶನ ಮೂರ್ತಿಯನ್ನು ಪೂಜಿಸುತ್ತೇವೆ. ಪ್ರತಿವರ್ಷವೂ ನಮ್ಮ ಮನೆಯಲ್ಲಿ ಗಣೇಶನ ಮೂರ್ತಿ ಪ್ರತಿಷ್ಠಾಪಿಸುತ್ತೇವೆ.
>
> **– ಮುಸ್ತಫಾ–ಯಾಸ್ಮಿನಾಬಾನು.**
> ಹಜರತಲಿ ತಂದೆ–ತಾಯಿ.





ಪ್ರೀತಿ. ದೇವರು–ಧರ್ಮ, ಜಾತಿ ಹೆಸರಿನಲ್ಲಿ ದೇಶದಲ್ಲಿ ನಡೆಯುತ್ತಿರುವ ಅರಾಜಕತೆ, ಧರ್ಮಯುದ್ಧದ ಬಗ್ಗೆ ಏನೂ ಅರಿಯದ ಪುಟಾಣಿ ತಾನು ಗಣೇಶನನ್ನು ಮನೆಗೆ ತೆಗೆದುಕೊಂಡು ಹೋಗಬೇಕು, ಎಲ್ಲರಂತೆ ಪೂಜಿಸಬೇಕು, ಪಟಾಕಿ ಹೊಡೆಯಬೇಕು, ಕುಣಿದು ಕುಪ್ಪಳಿಸಬೇಕೆಂಬ ಹಂಬಲ. ಈ ಬಗ್ಗೆ ತಂದೆ–ತಾಯಿ ಹತ್ತಿರ ಕೇಳಿ, ಹಠ ಮಾಡಿದ್ದರೂ ತಂದೆ ಹೇಗೂ ಸಮಾಧಾನ ಮಾಡಿ ಮಾತು ಮರೆಸಿದ್ದರು.

ಆದರೆ ಗಣೇಶ ಚತುರ್ಥಿ ದಿನ ಎಲ್ಲರೂ ಮನೆಗೆ ಗಣೇಶನ ಮೂರ್ತಿ ತರುವುದನ್ನು ಗಮನಿಸಿದ ಹಜರತಲಿ, ತನ್ನ ಅಣ್ಣನೊಂದಿಗೆ ಗಣೇಶಮೂರ್ತಿ ಮಾರಾಟ ಮಾಡುವಲ್ಲಿಗೆ ಹೋಗಿ ಗಣೇಶನ ಮೂರ್ತಿಯನ್ನು ಮನೆಗೆ ತಂದಿದ್ದಾರೆ. ಇದನ್ನು ಕಂಡ ತಂದೆ–ತಾಯಿ ಒಂದು ಕ್ಷಣ ಮೌನವಾದರು. ಗ್ರಾಮೀಣ ಭಾಗದ ಪರಿಸರ, ಜಾತಿ–ಧರ್ಮದ ಹಂಗಿಲ್ಲದೇ ಎಲ್ಲರೊಂದಿಗೆ ಸಹೋದರತ್ವ ಭಾವನೆಯಿಂದ ಬದುಕುವುದನ್ನು ಅರಿತ ತಂದೆ–ತಾಯಿಗಳು ಮಗನ ಬಗ್ಗೆ ಒಂದಿಷ್ಟೂ ಬೇಸರ ಮಾಡಿಕೊಳ್ಳದೇ ಗಣೇಶನ ಮೂರ್ತಿಯನ್ನು ಶ್ರದ್ಧಾ–ಭಕ್ತಿಯಿಂದ ಬರಮಾಡಿಕೊಂಡು ಮನೆಯಲ್ಲಿ ಪ್ರತಿಷ್ಠಾಪಿಸಿ ಹಿಂದೂ ಸಂಪ್ರದಾಯದಂತೆ ಪೂಜಿಸಿರುವುದು 'ದೇವನೊಬ್ಬ–ನಾಮ ಹಲವು' ಎಂಬ ಭಾವೈಕ್ಯತೆಯನ್ನು ಸಾರಿದೆ.

> ದೇವರ ಹೆಸರಿನಲ್ಲಿ ಸಮಾಜದಲ್ಲಿ ಶಾಂತಿ–ಸುವ್ಯವಸ್ಥೆ ಕದಡುವವರ ನಡುವೆ ಮುಸ್ಲಿಂ ಧರ್ಮದವರಾದರೂ ತಮ್ಮ ಮಗನ ಆಸೆಯಂತೆ ಮನೆಯಲ್ಲಿ ಗಣೇಶನ ಮೂರ್ತಿಯನ್ನಿಟ್ಟು ಪೂಜಿಸಿ ಸಮಾಜಕ್ಕೆ ಮಾದರಿಯಾಗಿದ್ದಾರೆ. ಗ್ರಾಮೀಣ ಭಾಗದಲ್ಲಿ ಈಗಲೂ ಹಬ್ಬಗಳ ಆಚರಣೆಯ ಸಂದರ್ಭದಲ್ಲಿ ಎಲ್ಲ ಜಾತಿ, ಧರ್ಮದವರು ಪರಸ್ಪರ ಸ್ನೇಹ, ಸಹೋದರತ್ವದೊಂದಿಗೆ ಆಚರಿಸುತ್ತಾರೆ.
>
> **– ಈರಣ್ಣ ಶೀರನಳ್ಳಿ.**
> ಸೂರಣಗಿ ಗ್ರಾಮಸ್ಥರು.

---

### ಮುಸ್ಲಿಂ ಯುವಕರು ಪ್ರತಿಷ್ಠಾಪಿಸಿರುವ ಕೋಮು ಸೌಹಾರ್ದತೆಯ ಗಣೇಶ

## ಮಾದರಿಯಾದ ನದಾಫ್ ಗಲ್ಲಿ ಯುವಕರು

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗಣೇಶನೆಂದರೆ ಸರ್ವ ಧರ್ಮದವರಿಗೂ ಪ್ರೀತಿ, ಭಕ್ತಿ ತುಂಬಿ ಬರುತ್ತದೆ. ಜಾತಿ, ಮತ, ಪಂಥವೆನ್ನದೇ ಗಣೇಶನ ಹಬ್ಬದಲ್ಲಿ ಎಲ್ಲರೂ ಪಾಲ್ಗೊಂಡು ವಿಜೃಂಭಿಸುತ್ತಾರೆ. ಇದಕ್ಕೆ ಇಲ್ಲಿಯ ನದಾಫ್ ಗಲ್ಲಿಯ ಮುಸ್ಲಿಂ ಯುವಕರು ಉದಾಹರಣೆಯಾಗಿದ್ದು, ಗಣೇಶನನ್ನು ಪ್ರತಿಷ್ಠಾಪಿಸಿ ಕೋಮು ಸೌಹಾರ್ದತೆಯನ್ನು ಮೆರೆದಿದ್ದಾರೆ.

ಕಳೆದ ಮೂರು ವರ್ಷಗಳಿಂದ ಗಣೇಶನನ್ನು ಪ್ರತಿಷ್ಠಾಪಿಸುತ್ತಾ ಬಂದಿರುವ ಯುವಕರು ನದಾಫ್ ಗಲ್ಲಿ ಗಣೇಶೋತ್ಸವ ಸಂಘವನ್ನು ರಚಿಸಿಕೊಂಡಿದ್ದಾರೆ. ಈ ವರ್ಷವೂ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮಾಡುತ್ತಾ ಗಣೇಶನನ್ನು ಪ್ರತಿಷ್ಠಾಪಿಸಿದ್ದಾರೆ. ನದಾಫ್ ಗಲ್ಲಿಯ 20 ಜನ ಮುಸ್ಲಿಂ ಯುವಕರು ಮುಸ್ಲಿಂ ಬಾಂದವರ ಮನೆ ಮನೆಗೆ ತೆರಳಿ ದೇಣಿಗೆ ಪಡೆದುಕೊಂಡು ಗಣೇಶನನ್ನು ಪ್ರತಿಷ್ಠಾಪಿಸಿದ್ದು ಗ್ರಾಮದಲ್ಲಿ ಕೋಮು ಸೌಹಾರ್ದತೆಯ ಗಣಪ ಎಂದೇ ಬಿಂಬಿತವಾಗಿದೆ.

ನದಾಫ್ ಗಲ್ಲಿಯಲ್ಲಿ ಇರುವ ಕಲ್ಮೇಶ್ವರ ದೇಗುಲದ ಪಕ್ಕಕ್ಕೆ ಪ್ರತಿಷ್ಠಾಪಿಸಲಾಗಿರುವ ಗಣೇಶನಿಗೆ ತಾವೇ ನೈವೇದ್ಯ ತಯಾರಿಸಿ ವಿಧಿ–ವಿಧಾನಗಳೊಂದಿಗೆ ಪೂಜೆ ಸಲ್ಲಿಸಿ ಭಕ್ತಿಯ ನಮನ ಸಲ್ಲಿಸುತ್ತಾರೆ. ಇದರ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಿ ಕೋಮು ಸೌಹರ್ದತೆಗೆ ಸಾಕ್ಷಿಯಾಗಿದ್ದಾರೆ.

> ದೇವರಿಗೆ ಯಾವುದೇ ಜಾತಿ, ಬೇಧ–ಭಾವವಿಲ್ಲ. ದೇವರಿಗೆ ಎಲ್ಲರೂ ಒಂದೇ. ದೇವರಿಗೆ ಹೆಸರುಗಳು ಬೇರೆ ಬೇರೆ ಇದ್ದರೂ ಎಲ್ಲರನ್ನು ಸಮಾನವಾಗಿ ಕಾಣುತ್ತಾನೆ. ಹೀಗಾಗಿ ವಿಘ್ನ ನಿವಾರಕ ಗಣೇಶನನ್ನು ಕಳೆದ ಮೂರು ವರ್ಷಗಳಿಂದ ಪ್ರತಿಷ್ಠಾಪಿಸುತ್ತಾ ಬಂದಿದ್ದೇವೆ. ನದಾಫ್ ಗಲ್ಲಿಯ ಬಂಧು–ಭಾಂದವರು ಬಂದು ಭಕ್ತಿಯ ನಮನ ಸಲ್ಲಿಸುತ್ತಾರೆ. 5ನೇ ದಿನಕ್ಕೆ ಗ್ರಾಮದ ಪ್ರಮುಖ ಬೀದಿಯಲ್ಲಿ ಸರಳವಾಗಿ ಮೆರವಣಿಗೆ ಮಾಡಿ ಹಾಲಗೊಂಡ ಬಸವೇಶ್ವರ ಕೆರೆಗೆ ವಿಸರ್ಜನೆ ಮಾಡುತ್ತೇವೆ ಎಂದು ಗಣೇಶೋತ್ಸವ ಸಂಘದ ಅಧ್ಯಕ್ಷ ಮಹ್ಮದಸಾಬ ನದಾಫ್, ಉಪಾಧ್ಯಕ್ಷ ಭಕ್ಷಿಸಾಬ ನದಾಫ್, ಕಾರ್ಯದರ್ಶಿ ಧರಿಯಾಸಾಬ ನದಾಫ್ ಹೇಳುತ್ತಾರೆ.

ಐದು ದಿನ ಗಣೇಶನನ್ನು ಪ್ರತಿಷ್ಠಾಪಿಸಲಾಗುತ್ತಿದ್ದು ಕೊನೆಯ ದಿನ ಮುಂಜಾನೆ ಅನ್ನ ಸಂತರ್ಪಣೆ ನಡೆಯುವುದು. ಗ್ರಾಮದ ಎಲ್ಲ ಸಮುದಾಯದವರನ್ನು ಕರೆದು ಭಕ್ತಿಯಿಂದ ಅನ್ನ ಸಂತರ್ಪಣೆ ಮಾಡುತ್ತಾರೆ. ಮೊದಲನೇ ವರ್ಷ ಚಿಕ್ಕದಾದ ಗಣೇಶನನ್ನು ಪ್ರತಿಷ್ಠಾಪಿಸಿದ್ದ ಯುವಕರು, 2ನೇ ವರ್ಷ ದೊಡ್ಡದು ಮತ್ತು ಈ ವರ್ಷ ಮತ್ತಷ್ಟು ದೊಡ್ಡ ಗಣೇಶನನ್ನು ಪ್ರತಿಷ್ಠಾಪಿಸಿದ್ದು, ಗಣೇಶನ ಮೇಲಿರುವ ಪ್ರೀತಿ ಮತ್ತು ಭಕ್ತಿಯಿಂದ ನಮಗೆ ಒಳ್ಳೆಯದಾಗಿದೆ ಎನ್ನುತ್ತಾರೆ ಮುಸ್ಲಿಂ ಯುವಕರು.

---

## ಅಂಗನವಾಡಿ ಕಟ್ಟಡದ ಭೂಮಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ನಂದಿಶ್ವರ ನಗರದಲ್ಲಿ ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ 2024–25 ಸಾಲಿನ ವಿಶೇಷ ಅನುದಾನದಡಿಯಲ್ಲಿ ಅಂದಾಜು ರೂ.20 ಲಕ್ಷ ಅನುದಾನದಲ್ಲಿ ನಿರ್ಮಿಸುವ ನಂದಿಶ್ವರ ನಗರದ ಸರ್ಕಾರಿ ಕಿರಿಯ ಕನ್ನಡ ಪ್ರಾಥಮಿಕ ಶಾಲೆ ನಂ. 20 ರಲ್ಲಿರುವ ಅಂಗನವಾಡಿ ಕೇಂದ್ರ ಸಂಖ್ಯೆ 256 ರ ನೂತನ ಅಂಗನವಾಡಿ ಕಟ್ಟಡ ನಿರ್ಮಾಣದ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದ್ಯಸರಾದ ಶ್ರೀಮತಿ ವಿದ್ಯಾವತಿ ಗಡಗಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ ಎಲ್ ಬಾರಟಕ್ಕಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರು, ಸಿಡಿಪಿಓ ಹುಲಿಗೆವ್ವ ಜೋಗೆರ್, ಬಿಇಓ ಆರ್ ಎಸ್ ಬುರಡಿ, ಕೆಆರ್ ಐ ಡಿ ಎಲ್ ಇಇ ಅನೀಲ್ ಪಾಟೀಲ, ಎಇಇ ಪಿ ಜೆ ಧಾರವಾಡ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಜರಿದ್ದರು.

---

### ಪತ್ರಿಕಾಗೋಷ್ಠಿಯಲ್ಲಿ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ್ ನಾಡಗೌಡರ

# ಸ್ವಾಮಿ ವಿವೇಕಾನಂದರ ಮೂರ್ತಿ ಅನಾವರಣ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ಭಾರತದ ಆಧ್ಯಾತ್ಮಿಕ ಶಕ್ತಿ ಪರಿಚಯಿಸಿದವರು ಸ್ವಾಮಿ ವಿವೇಕಾನಂದರು. ಸ್ವಾಮಿ ವಿವೇಕಾನಂದರ ವಿಶ್ವ ವಿಖ್ಯಾತ ಶಿಕಾಗೊ ಭಾಷಣ ಮಾಡಿದ ದಿನವಾದ ಸೆಪ್ಟೆಂಬರ್ 11ರಂದು ಜಿಲ್ಲೆಯ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ನಾಗಾವಿಯ ಕ್ಯಾಂಪಸ್‌ನಲ್ಲಿ ವಿಶ್ವಚೇತನ ಸ್ವಾಮಿ ವಿವೇಕಾನಂದರ 39.5 ಅಡಿ ಎತ್ತರದ ಪುತ್ಥಳಿ ಅನಾವರಣ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ್ ನಾಡಗೌಡರ ತಿಳಿಸಿದರು.

ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸಭವನದಲ್ಲಿ ಸೋಮವಾರ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಸ್ನೇಹ–ಸಹೋದರತ್ವ ಭಾವನೆಯ ಪ್ರತೀಕವಾಗಿ ವಿಶ್ವದ ಗಮನವನ್ನು ಸೆಳೆದ ಮಹಾನ್ ಚೇತನ, ಭಾರತೀಯ ಚಿಂತನ ಶೈಲಿಯ ಮಹತ್ವವನ್ನು ವಿಶ್ವ ಮಾನ್ಯಗೊಳಿಸಿದವರು ಸ್ವಾಮಿ ವಿವೇಕಾನಂದರು. ಇಂತಹ ಆದರ್ಶ ವ್ಯಕ್ತಿತ್ವದ ಪ್ರತಿಕೃತಿಯನ್ನು ಸ್ಥಾಪಿಸುವುದರ ಮೂಲಕ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ನಡೆಸುತ್ತಿರುವ ವಿದ್ಯಾರ್ಥಿಗಳಲ್ಲಿ ಅವರ ವಿಚಾರಧಾರೆಗಳನ್ನು ಪುನಶ್ಚೇತನಗೊಳಿಸುವ ಪ್ರಯತ್ನವನ್ನು ಮಾಡುವುದು, ಕರ್ನಾಟಕ ಹಾಗೂ ದೇಶದಲ್ಲಿ ವಿವೇಕಾನಂದರ ಪ್ರಸ್ತುತಿಯನ್ನು ಪ್ರಚುರಪಡಿಸಲು ವಿಶ್ವವಿದ್ಯಾಲಯದ ಆವರಣದಲ್ಲಿ ಸ್ವಾಮಿ ವಿವೇಕಾನಂದರ ಭವ್ಯವಾದ ಕಂಚಿನ ಪುತ್ಥಳಿಯನ್ನು ಕಲ್ಕತ್ತಾದ ಸ್ವಾಮಿ ವಿವೇಕಾನಂದ ರಾಮಕೃಷ್ಣ ಮಿಷನ್‌ರವರು ಒದಗಿಸಿದ್ದಾರೆ.



> ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಆವರಣದಲ್ಲಿ ನಿರ್ಮಿಸಿರುವ ಖಾದಿ ಮಳಿಗೆ ಹಾಗೂ ಸ್ವಾಮಿ ವಿವೇಕಾನಂದ ಮತ್ತು ಮಹಾತ್ಮಾ ಗಾಂಧಿಯವರ ಕುರಿತಾದ ಪುಸ್ತಕಗಳು ಹಾಗೂ ವಿಶ್ವವಿದ್ಯಾಲಯದ ಇತರ ಪ್ರಕಟಣೆಗಳ ಪ್ರಚಾರ ಹಾಗೂ ಮಾರಾಟ ಮಳಿಗೆಗಳನ್ನು, ವಿಶ್ವ ವಿದ್ಯಾಲಯದ ಸ್ಪೋರ್ಟ್ಸ್ ಮತ್ತು ವ್ಯಾಯಾಮ ಶಾಲೆ ಕಟ್ಟಡದ ಉದ್ಘಾಟನೆಯನ್ನು ಸಹ ನೆರವೇರಿಸಲಾಗುವುದು ಎಂದು ಕುಲಸಚಿವರಾದ ಪ್ರೊ. ಡಾ.ಸುರೇಶ ವಿ.ನಾಡಗೌಡರ ತಿಳಿಸಿದರು.

ಈ ಪುತ್ಥಳಿಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ್, ಗದಗಿನ ವಿವೇಕಾನಂದ ರಾಮಕೃಷ್ಣ ಆಶ್ರಮದ ಸ್ವಾಮಿ ನಿರ್ಭಯಾನಂದಜಿ ಇವರುಗಳ ಮಾರ್ಗದರ್ಶನದಲ್ಲಿ ನಿರ್ಮಿಸಲಾಗಿದೆ ಎಂದು ತಿಳಿಸಿದರು.


ಅನಾವರಣ ಸಮಾರಂಭವನ್ನು ಸೆಪ್ಟೆಂಬರ್ 11ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಸಮಾರಂಭಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರಾದ ಪ್ರಿಯಾಂಕ ಖರ್ಗೆ, ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳ, ಸಂಸದೀಯ ವ್ಯವಹಾರಗಳ ಮತ್ತು ಶಾಸನ ಮತ್ತು ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ್ ಸೇರಿದಂತೆ ವಿವಿಧ ಗಣ್ಯರು ಆಗಮಿಸಲಿದ್ದಾರೆ. ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿನಾನಂದಜೀ, ತೋಂಟದಾರ್ಯ ಮಠದ ಶ್ರೀ ಸಿದ್ಧರಾಮೇಶ್ವರ ಮಹಾಸ್ವಾಮಿ, ಗದಗನ ರಾಮಕೃಷ್ಣ ವಿವೇಕಾನಂದ ಆಶ್ರಮದ ಶ್ರೀ ನಿರ್ಭಯಾನಂದ ಸ್ವಾಮಿಯುವರು ಸಾನ್ನಿಧ್ಯ ವಹಿಸಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿ ಜೆ.ಸಿ. ಪ್ರಶಾಚಿತ, ಉಮೇಶ ಬಾರ್ಕಿ, ಶಶಿಭೂಷಣ, ಡಾ. ಅಬ್ದುಲ್ಲ, ಗಿರೀಶ ದೀಕ್ಷಿತ್, ಪ್ರಶಾಂತ ಮೆಹರವಾಡೆ ಇದ್ದರು.

---

## ನಾನೂ ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿ: ಬಸವರಾಜ ರಾಯರಡ್ಡಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ



ರಾಜ್ಯದಲ್ಲಿ ಮುಖ್ಯಮಂತ್ರಿ ಆಗಬೇಕು ಎಂದು ಕೆಲವರು ಆಸೆ ಪಡುತ್ತಿದ್ದಾರೆ. ಆ ಹುದ್ದೆ ಖಾಲಿಯಿಲ್ಲ. ಆದರೆ ಬೇರೆಯವರಿಗೆ ಸಿ.ಎಂ. ಸ್ಥಾನ ಕೊಡುವುದಾದರೆ ನಾನೂ ಆಕಾಂಕ್ಷಿ ಎಂದು ಮುಖ್ಯಮಂತ್ರಿ ಅವರ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗಕ್ಕೆ ಸಿ.ಎಂ. ಸ್ಥಾನ ಕೊಡುವುದಾದರೆ ನಾನೇ ಮುಂಚೂಣಿಯಲ್ಲಿರುವೆ ಎಂದರು.

ಸಿದ್ದರಾಮಯ್ಯ ಮುಂದಿನ ಮೂರೂವರೆ ವರ್ಷ ಸಿ.ಎಂ. ಆಗಿರಬೇಕು. ಆಗಮಾತ್ರ ರಾಜ್ಯ ಅಭಿವೃದ್ಧಿ ಆಗುತ್ತದೆ. ಅವರೇ ಮುಂದುವರೆಯಬೇಕು ಅಂತ ನಮ್ಮ ಆಸೆಯಿದೆ ಎಂದರು. ಸಿದ್ದರಾಮಯ್ಯ ತಮ್ಮ ಸ್ಥಾನದಿಂದ ಕೆಳಗೆ ಇಳಿಯುತ್ತಾರೆ ಎಂದು ನಿಮಗೆ ಹೇಳಿದವರು ಯಾರು ಎಂದು ಪ್ರಶ್ನಿಸಿದರು.

ಆರ್.ವಿ. ದೇಶಪಾಂಡೆ ಮುಖ್ಯಮಂತ್ರಿ ಸ್ಥಾನ ಕುರಿತು ನೀಡಿದ ಹೇಳಿಕೆಯಲ್ಲಿ ತಪ್ಪೇನೂ ಇಲ್ಲ. ನಾನು ಕೂಡ ಲಿಂಗಾಯತ ನಾಯಕ. ಬಿ.ಆರ್. ಪಾಟೀಲ ಹಾಗೂ ನಾನು ಹಿರಿಯರಿದ್ದೇವೆ. ನಾನು ಸಿಎಂ ಯಾಕೆ ಆಗಬಾರದು, ನಮ್ಮ ಪಕ್ಷ ಲಿಂಗಾಯತ ಸಮುದಾಯಕ್ಕೆ ಕೊಡುವುದಾದರೆ ನನಗೆ ಸ್ಥಾನ ನೀಡಲಿ ಎಂದರು.

---

### ಹೆಸರು ಖರೀದಿ ಕೇಂದ್ರ ಉದ್ಘಾಟಿಸಿದ ಸಂಸದ ಬೊಮ್ಮಾಯಿ ಅಭಿಮತ

# ಖರೀದಿ ಕೇಂದ್ರಗಳು ರೈತರಿಗೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕೇಂದ್ರ ಸರಕಾರ ಹೆಚ್ಚಿನ ಪ್ರಮಾಣದಲ್ಲಿ ಎಫ್‌ಎಕ್ಯೂ ಗುಣಮಟ್ಟದ ಹೆಸರು ಕಾಳು ಖರೀದಿಸಲು ರಾಜ್ಯ ಸರಕಾರಕ್ಕೆ ಅನುಮತಿ ನೀಡಿದ್ದು, ರೈತರ ಅನುಕೂಲಕ್ಕಾಗಿ ಹಾಗೂ ಆರ್ಥಿಕವಾಗಿ ಸಬಲರಾಗುವುದಕ್ಕೆ ಖರೀದಿ ಕೇಂದ್ರಗಳು ಸಹಕಾರಿಯಾಗಲಿವೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿಯ ಟಿಎಪಿಸಿಎಂಎಸ್ ಕಟ್ಟಡದಲ್ಲಿ ಶಿರಹಟ್ಟಿ ತಾಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಹೆಸರು ಕಾಳು ಖರೀದಿ ಕೇಂದ್ರ ಉದ್ಘಾಟನೆ ನೆರವೇರಿಸಿ ಮಾತನಾಡಿದರು.




ಖರೀದಿ ಕೇಂದ್ರದಲ್ಲಿ ಮಧ್ಯವರ್ತಿಗಳ ಹಾವಳಿ ಮತ್ತು ಗುಣಮಟ್ಟದ ಹೆಸರಿನಲ್ಲಿ ರೈತರಿಗೆ ಕಿರಿಕಿರಿ ಆಗದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು. ಕ್ಷೇತ್ರದ ರೈತರಿಗೆ ಸಹಕಾರಿಯಾಗಲಿ ಎಂದು ಶಿರಹಟ್ಟಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಸರಕಾರದ ಹೆಸರು ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗುತ್ತಿದೆ. ರೈತರು ಯೋಜನೆಯ ಸದುಪಯೋಗ ಪಡೆದುಕೊಂಡು ತಾವು ಬೆಳೆದಿರುವ ಹೆಸರು ಕಾಳನ್ನು ಕೇಂದ್ರದಲ್ಲಿ ಮಾರಾಟ ಮಾಡುವಂತೆ ಸೂಚಿಸಿದರು.

ಈ ಯೋಜನೆ ಅಡಿಯಲ್ಲಿ ಪ್ರತಿ ಕ್ವಿಂಟಾಲ್ ಹೆಸರು ಕಾಳು ಖರೀದಿಗೆ ರೂ. 8.682 ನೀಡಲಾಗುತ್ತಿದೆ. ಹಾಗೂ ಪ್ರತಿ ರೈತರಿಂದ ಗರಿಷ್ಠ 10 ಕ್ವಿಂಟಾಲ್ ಹೆಸರು ಕಾಳುಗಳನ್ನು ಖರೀದಿಸುವ ಪ್ರಕ್ರಿಯೆ ನಡೆಯಲಿದೆ. ತಾಲೂಕಿನ ರೈತರು ಬೇಕಾ ಬಿಟ್ಟಿ ದರಕ್ಕೆ ಮಾರಟ ಮಾಡದೇ ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆ ದರಕ್ಕೆ ಮಾರಾಟ ಮಾಡಬೇಕು ಎಂದು ಕರೆ ನೀಡಿದರು.

ಶಾಸಕ ಚಂದ್ರು ಲಮಾಣಿ, ತಹಸೀಲ್ದಾರ ಅನಿಲ ಬಡಿಗೇರ, ಟಿಎಪಿಸಿಎಂಎಸ್ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಸ ಮಹಾಜನಶೆಟ್ಟರ, ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಚಂದ್ರಕಾಂತ ನೂರಶೆಟ್ಟರ, ಜಾನು ಲಮಾಣಿ, ಫಕ್ಕೀರೇಶ ರಟ್ಟಿಹಳ್ಳಿ, ಸುರಣ್ಣ ಕಪ್ಪತ್ತನವರ, ಉಮೇಶ ಗಾಣಗೇರ, ಅಶೋಕ ವರವಿ, ಸಂದೇಶ ಗಾಣಗೇರ, ಅಶೋಕ ಕೋಲಾರ, ಪ್ರವೀಣ ಜೈನ್, ಮುತ್ತಣ್ಣ ಕಪ್ಪತ್ತನವರ, ಶರಣಪ್ಪ ಸಿಂದಗಿ, ಎಡಿಎ ರೇವಣೆಪ್ಪ ಮನಗೂಳಿ ಮುಂತಾದವರು ಉಪಸ್ಥಿತರಿದ್ದರು.

> ತಾಲೂಕಿನಲ್ಲಿ ಕೃಷಿ ಇಲಾಖೆ ನೀಡಿದ ಮಾಹಿತಿ ಪ್ರಕಾರ ಈ ಬಾರಿ 3.200 ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬಿತ್ತನೆ ಗುರಿ ಹೊಂದಲಾಗಿತ್ತು. ಆದರೆ ಗುರಿಗಿಂತ ಹೆಚ್ಚು ಅಂದರೆ 4.329 ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬಿತ್ತನೆ ಮಾಡಿ ಫಸಲು ತೆಗೆಯಲಾಗಿದೆ. ಉತ್ತಮ ಮತ್ತು ಯೋಗ್ಯ ಬೆಂಬಲ ಬೆಲೆಯನ್ನು ರೈತರಿಗೆ ನೀಡುತ್ತಿದ್ದು, ಅಧಿಕಾರಿಗಳು ಹೆಚ್ಚಿನ ಪ್ರಮಾಣದಲ್ಲಿ ರೈತರಿಗೆ ತಿಳಿಸಿ ಇದರ ಲಾಭ ಪಡೆದುಕೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಕರೆ ನಿಡಿದರು.

## ಸಾಕ್ಷಿ ಸುಭಾಷಿತ

**ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ**

**–ಸುಭಾಷಿತ**

## ಸಂಪಾದಕೀಯ

# ಹಾದಿ ಬೀದಿಗೊಬ್ಬರು ಸಿಎಂ!

ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಪಾತ್ರ ಇನ್ನೂ ಸ್ಪಷ್ಟವಾಗಿಲ್ಲ. ಪ್ರಕರಣದ ಕುರಿತಾಗಿ ನಡೆದ ವಿಚಾರಣೆಯಲ್ಲೂ ಸದ್ಯಕ್ಕೆ ಸಿಎಂ ಸಿದ್ದರಾಮಯ್ಯ ಅವರಿಗೆ ಯಾವುದೇ ಸಂಕಷ್ಟ ಎದುರಾಗಿಲ್ಲ. ಸೋಮವಾರ ವಾದ ಪ್ರತಿವಾದ ಆಲಿಸಿದ ಕೋರ್ಟ್ , ವಿಚಾರಣೆಯನ್ನು ಸೆಪ್ಟೆಂಬರ್ 12ಕ್ಕೆ ಮುಂದೂಡಿದೆ. ಅಲ್ಲಿಯವರೆಗೆ ಸಿದ್ದರಾಮಯ್ಯ ಅವರಿಗೆ ಯಾವುದೇ ಸಂಕಷ್ಟ ಇಲ್ಲ. ವಿಚಾರಣೆಯ ವಿವರಗಳನ್ನು ಗಮನಿಸಿದರೆ ಸದ್ಯಕ್ಕೆ ಸಿದ್ದರಾಮಯ್ಯ ಸೇಫ್ ಎನ್ನಬಹುದು.

ಆದರೆ ಕಾಂಗ್ರೆಸ್ ನಾಯಕರಿಗೆ ಸಿದ್ದರಾಮಯ್ಯ ತಲೆದಂಡಕ್ಕೆ ಕಾದು ಕುಳಿತವರಂತೆ ವರ್ತಿಸುತ್ತಿದ್ದಾರೆ. ಇವತ್ತೆ ಸಿಎಂ ಖುರ್ಚಿ ಖಾಲಿ ಆಗಲಿದೆ ಎನ್ನುವ ರೀತಿಯಲ್ಲಿ ಹೇಳಿಕೆ ಕೊಡುತ್ತಿದ್ದಾರೆ. ನಾನು ಸಿಎಂ, ನೀನೂ ಸಿಎಂ ಎನ್ನುತ್ತಾ ತಿರುಕನ ಕನಸು ಕಾಣುತ್ತಿದ್ದಾರೆ. ಸಿದ್ದರಾಮಯ್ಯ ಮೇಲಿನ ಪ್ರಕರಣದ ವಿಷಯಕ್ಕಿಂತ ಸಿಎಂ ತಲೆದಂಡಕ್ಕೆ ಬಿಜೆಪಿ ನಾಯಕರಿಗಿಂತ ಕಾಂಗ್ರೆಸ್ಸಿಗರಿಗೆ ಹೆಚ್ಚು ಅವಶ್ಯಕತೆ ಮತ್ತು ಅವಸರ ಎನ್ನುವಂತಾಗಿದೆ ಇಂದಿನ ರಾಜಕೀಯ ಸ್ಥಿತಿ.

ವಾರದ ಹಿಂದಷ್ಟೆ ಕಾಂಗ್ರೆಸ್ ನಲ್ಲಿ ಸಿಎಂ ಸ್ಥಾನದ ಆಕಾಂಕ್ಷಿಗಳು ಬೆರಳೆಣಿಕೆಯಷ್ಟು ಇದ್ದರು. ಆದರೆ ಈಗ ಹಾದಿಗೊಬ್ಬ ಬೀದಿಗೊಬ್ಬ ಸಿಎಂ ಎನ್ನುವಂತಾಗಿದೆ. ಸದ್ಯ ವಿಧಾನಸಭೆಯಲ್ಲಿ ಮೊದಲ ಬಾರಿಗೆ ಶಾಸಕರಾಗಿರುವ ಕಾಂಗ್ರೆಸ್ಸಿಗರನ್ನು ಹೊರತುಪಡಿಸಿ, ಇನ್ನುಳಿದ ಎಲ್ಲರೂ ಸಿಎಂ ಸ್ಥಾನದ ಆಕಾಂಕ್ಷಿಗಳೇ ಎನ್ನುವಷ್ಟರ ಮಟ್ಟಿಗೆ ಸಿಎಂ ಆಕಾಂಕ್ಷಿಗಳ ಪಟ್ಟಿ ದೊಡ್ಡದಾಗುತ್ತಿದೆ.

ಮೊದಲು ಹಿರಿತನದ ಮೇಲೆ ಮುಖ್ಯಮಂತ್ರಿ ಹುದ್ದೆ ಬಯಸಿದ್ದ ನಾಯಕರು, ಈಗ ಕಲ್ಯಾಣ ಕರ್ನಾಟಕ, ಮುಂಬೈ ಕರ್ನಾಟಕ, ಲಿಂಗಾಯತ ನಾಯಕ, ಹಿಂದುಳಿದ ಸಮುದಾಯದ ನಾಯಕ ಎಂದು ತಾವೇ ಹೇಳಿಕೊಂಡು ಮಾತ್ರ ಪಕ್ಷಕ್ಕೆ ಮುಜುಗುರ ತರುವ ಕೆಲಸ ಮಾಡುತ್ತಿದ್ದಾರೆ. ವಿಶೇಷ ಎಂದರೆ ರಾಜ್ಯದ ಯಾವುದೇ ಕಾಂಗ್ರೆಸ್ ನಾಯಕರಿರಲಿ, ಈವರೆಗೆ ಯಾರೊಬ್ಬರೂ ನಾನು ಸಿಎಂ ಸ್ಥಾನದ ಆಕಾಂಕ್ಷಿ ಅಲ್ಲ ಎನ್ನುವಂಥ ಹೇಳಿಕೆ ನೀಡಿಲ್ಲ. ಆದರೆ ಕೆಲ ಹಿರಿಯ ನಾಯಕರು ಸದ್ಯ ಸಿಎಂ ಹುದ್ದೆ ಖಾಲಿ ಇಲ್ಲ ಎನ್ನುವ ಜಾಣ ಉತ್ತರ ಕೊಡುತ್ತಿದ್ದಾರೆಯೇ ಹೊರತು ಖಡಾಖಂಡಿತವಾಗಿ ನಾನು ಸಿಎಂ ಹುದ್ದೆಯ ಆಕಾಂಕ್ಷಿ ಅಲ್ಲ ಎನ್ನುತ್ತಿಲ್ಲ.

ಅದರಲ್ಲೂ ಸಿದ್ದರಾಮಯ್ಯ ಅವರ ಅತ್ಯಾಪ್ತ, ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಸಹ ಸಿಎಂ ಸ್ಥಾನದ ಆಕಾಂಕ್ಷಿ ಎಂದು ಹೇಳಿಕೊಂಡಿರುವುದು ನೋಡಿದರೆ, ಸಿದ್ದರಾಮಯ್ಯ ತಲೆದಂಡಕ್ಕೆ ಎಷ್ಟೊಂದು ಆತುರ ಎನ್ನುವುದು ಗೊತ್ತಾಗುತ್ತದೆ. ಸದ್ಯಕ್ಕೆ ಸಿದ್ದರಾಮಯ್ಯ ಅವರಿಗೆ ತಮ್ಮವರು ಯಾರು ಎಂದು ಗೊತ್ತಾದರೆ ಸಾಕು.

**ಸಭೆಯಲ್ಲಿ ರಾಜ್ಯಾಧ್ಯಕ್ಷ ಕಲಬುರ್ಗಿ ಆಗಮನ– ಕಿಲ್ಲೆದಾರ**

# ನಾಳೆ ಮುಸ್ಲಿಂ ಮೀಸಲಾತಿ ಮರು ಸ್ಥಾಪಿಸಲು ಒತ್ತಾಯಿಸಿ ಬೃಹತ್ ಸಭೆ




**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

2 ಬಿ ಮೀಸಲು ಶೇಕಡ 4 ರಿಂದ 8 ಕ್ಕೆ ಹೆಚ್ಚಳ ಹಾಗೂ ಮುಸ್ಲಿಂ ಮೀಸಲಾತಿ ಮರು ಸ್ಥಾಪಿಸಲು ಒತ್ತಾಯಿಸಲು ಕರ್ನಾಟಕ ಮುಸ್ಲಿಂ ಯೂನಿಟಿ ಏರ್ಪಡಿಸಲಿರುವ ಬೆಂಗಳೂರು ಚಲೋ ಕಾರ್ಯಕ್ರಮ ಕುರಿತು ಚರ್ಚಿಸಿ ನಿರ್ಣಯ ಕೈಗೊಳ್ಳಲು ಸೆ.11 ರ ಬುಧವಾರ ಬೆ. 11:30 ಗಂಟೆಗೆ ನಗರದ ಹೊರವಲಯದಲ್ಲಿ ಇರುವ ಹಜರತ್ ಮರ್ದಾನೆ ಗೈಬ್ ದರ್ಗಾ ಆವರಣದಲ್ಲಿ ಮುಸ್ಲಿಂ ಸಮುದಾಯದ ಬೃಹತ್ ಪೂರ್ವಭಾವಿ ಸಿದ್ಧತಾ ಸಭೆ ಜರುಗಲಿದೆ ಎಂದು ಕರ್ನಾಟಕ ಮುಸ್ಲಿಂ ಯುನಿಟಿ ಕೊಪ್ಪಳ ಜಿಲ್ಲಾ ಘಟಕದ ಅಧ್ಯಕ್ಷರಾದ ಮೊಹಮ್ಮದ್ ಜೀಲಾನ ಕಿಲ್ಲೇದಾರ್ ಮೈಲೈಕ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಸದರಿ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಚರ್ಚಿಸಲು ನಮ್ಮ ಕರ್ನಾಟಕ ಮುಸ್ಲಿಂ ಯೂನಿಟಿಯ ರಾಜ್ಯಾಧ್ಯಕ್ಷರಾದ ಅಬ್ದುಲ್ ಜಬ್ಬಾರ್ ಕಲಬುರ್ಗಿಯವರು ಆಗಮಿಸಲಿದ್ದಾರೆ ಎಂದು ಹೇಳಿದರು.

ಮುಸ್ಲಿಮರಿಗೆ ಮೀಸಲಾತಿ ಕಲ್ಪಿಸಲು ಒತ್ತಾಯಿಸಿ ವಿಜಯಪುರದಿಂದ ಬೆಂಗಳೂರು ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಇದರಲ್ಲಿ ಕೊಪ್ಪಳ ಜಿಲ್ಲೆಯಿಂದ ಹೆಚ್ಚಿನ ಜನ ಮುಸ್ಲಿಂ ಸಮುದಾಯದ ಪ್ರಮುಖರು ಸಂಘಟನೆಗಳ ಪದಾಧಿಕಾರಿಗಳು ಕಾರ್ಯಕರ್ತರು ಮತ್ತು ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಹಾಗೂ ಕಾರ್ಯಕ್ರಮದ ರೂಪರೇಶ ಸಿದ್ಧಗೊಳಿಸಲು ಚರ್ಚಿಸಲು ಪೂರ್ವಭಾವಿ ಸಿದ್ದತಾ ಸಭೆ ಸೆ.11 ಬುಧವಾರ ಬೆ. 11:30 ಗಂಟೆಗೆ ಕೊಪ್ಪಳ ನಗರದ ಹಜರತ್ ಮರ್ದಾನೆ ಗೈಬ್ ದರ್ಗಾ ಆವರಣದಲ್ಲಿ ಜರುಗಲಿದೆ, ಸಮಾಜದ ಹಕ್ಕುಗಳಿಗೆ ಹೋರಾಟ ಮಾಡುವ ಅನಿವಾರ್ಯತೆ ಬಂದಿದೆ. ಶಿಕ್ಷಣ ಉದ್ಯೋಗಗಳಲ್ಲಿ ಹಿಂದುಳಿದ ಮುಸ್ಲಿಂ ಸಮುದಾಯವನ್ನು ಅಭಿವೃದ್ಧಿ ಪಥಕ್ಕೆ ತರುವ ಉದ್ದೇಶದಿಂದ ಸರ್ಕಾರಕ್ಕೆ ಒತ್ತಾಯಿಸಲು ಮತ್ತು ಮನವರಿಕೆ ಮಾಡಲು ವಿವಿಧ ಹೋರಾಟಗಳನ್ನು ಹಮ್ಮಿಕೊಳ್ಳಲು ಪೂರ್ವಭಾವಿಯಾಗಿ ಚರ್ಚಿಸಿ ಅಗತ್ಯ ಕ್ರಮ ಮತ್ತು ನಿರ್ಣಯಗಳನ್ನು ಕೈಗೊಳ್ಳಲು ಈ ಮಹತ್ವದ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮುಸ್ಲಿಂ ಸಮಾಜ ಬಾಂಧವರು ಪಾಲ್ಗೊಳ್ಳುವಂತೆ ಕರ್ನಾಟಕ ಮುಸ್ಲಿಂ ಯುನಿಟಿ ಜಿಲ್ಲಾ ಘಟಕದ ಅಧ್ಯಕ್ಷ ಮೊಹಮ್ಮದ್ ಜಿಲಾನ ಕಿಲ್ಲೆದಾರ್ ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಉಪಾಧ್ಯಕ್ಷ ಸಿರಾಜ್ ಮನಿಯಾರ್, ತಾಲೂಕಾಧ್ಯಕ್ಷ ಫಕ್ರುಸಾಬ್ ನದಾಫ್, ತಾಲೂಕ ಉಪಾಧ್ಯಕ್ಷ ಇಬ್ರಾಹಿಂ ಪಟೇಲ್, ತಾಲೂಕ ಕಾರ್ಯದರ್ಶಿ ಹಜರತ್ ಅಲಿ, ಜಿಲ್ಲಾ ಕಾರ್ಯದರ್ಶಿ ಸಿಎಂ ಮುಸ್ತಫಾ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

**ಎಸ್.ಕೆ. ಇವೆಂಟ್ ಮ್ಯಾನೇಜ್‌ಮೆಂಟ್ ವತಿಯಿಂದ ರಾಜ್ಯ ಮಟ್ಟದ ಚದುರಂಗ ಸ್ಪರ್ಧೆ**

# ಚದುರಂಗದಿಂದ ಮೆದುಳಿಗೆ ಅಗಾಧ ಜ್ಞಾನ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಚದುರಂಗ ಪ್ರಪಂಚದ ಅತ್ಯಂತ ಜನಪ್ರಿಯ ಆಟಗಳಲ್ಲೊಂದು. ಕೆಲವರ ವರ್ಣನೆಯಂತೆ, ಇದು ಕೇವಲ ಆಟವಾಗಿರದೆ ಇದೊಂದು ಕಲೆ, ವಿಜ್ಞಾನ, ವರ್ಚುಯಲ್ ಯುದ್ಧಕಲೆ ಮತ್ತು ಮಾನಸಿಕ ವ್ಯಾಯಾಮ ಎಂದು ವರ್ಣಿಸಿದವರೂ ಉಂಟು ಎಂದು ಪುರಸಭೆ ಸದಸ್ಯ ಮುರ್ತುಜಾ ಡಾಲಾಯತ ಹೇಳಿದರು.

ನಗರದ ಸೇವಾಲಾಲ ಸಮುದಾಯ ಭವನದಲ್ಲಿ ರವಿವಾರ ಎಸ್.ಕೆ. ಇವೆಂಟ್ ಮ್ಯಾನೇಜ್‌ಮೆಂಟ್ ವತಿಯಿಂದ ನಡೆದ ರಾಜ್ಯ ಮಟ್ಟದ ಜ್ಯೂನಿಯರ್ ಮತ್ತು ಸೀನಿಯರ್ ಚಂದುರಂಗ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಮಾನವನ ಮೆದುಳಿಗೆ ಬುದ್ಧಿ ಪ್ರವೇಶವಾದರೆ ಯಾವತ್ತೂ ಕಳೆದು ಹೋಗುವುದಿಲ್ಲ. ಬುದ್ಧಿಶಕ್ತಿ ಸಕ್ರಿಯವಾಗಿರುವವರೆಗೆ ಸಾಧನೆ ಸಾಗುತ್ತಾ ಹೋಗುತ್ತದೆ. ಚದುರಂಗವನ್ನು ಆಡುವುದರಿಂದ ಮೆದುಳಿಗೆ ಅಗಾಧ ಜ್ಞಾನ ಸಿಗುತ್ತದೆ ಮತ್ತು ಜೀವನದಲ್ಲಿ ಬರುವ ಸಮಸ್ಯೆಗಳನ್ನು ನಿವಾರಣೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಬಳಿಕ ಪುರಸಭೆ ಸದಸ್ಯ ರಾಜೂ ಸಾಂಗ್ಲೀಕರ ಮಾತನಾಡಿ, ಚದುರಂಗ ಅದೃಷ್ಟವನ್ನು ಅವಲಂಬಿಸಿದ ಆಟವಲ್ಲ. ಶುದ್ಧವಾಗಿ ಆಟಗಾರರ ಆಲೋಚನೆ, ಯೋಜನಾ ಸಾಮರ್ಥ್ಯ ಮತ್ತು ಮುಂದಾಲೋಚನೆಗಳನ್ನು ಅವಲಂಬಿಸಿದ ಆಟ. ಚೆಸ್ ಆಡುವುದರಿಂದ ಮಕ್ಕಳಲ್ಲಿ ಬುದ್ಧಿ ಚುರುಕಾಗುವ ಜತೆಗೆ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ ಎಂದರು.



ಯುವ ಮುಖಂಡ, ಗುತ್ತಿಗೆದಾರರಾದ ಪ್ರಕಾಶ ರಾಠೋಡ ಮಾತನಾಡಿ, ಕೆಲವರು ಚದುರಂಗ ಆಡುತ್ತಾರೆ, ಮತ್ತೆ ಕೆಲವರ ಜೀವನವೇ ಚದುರಂಗದ ಆಟದಂತೆ ಆಗಿರುತ್ತದೆ. ಚದುರಂಗದಲ್ಲಿ ಯಶಸ್ಸು ಸಿಗಬೇಕಾದರೆ ಬೌದ್ಧಿಕತೆ ಬೇಕು. ತಂತ್ರಗಾರಿಕೆ, ಬುದ್ಧಿ ಚುರುಕು ಮತ್ತು ತೀಕ್ಷ್ಣ ಆಗಿರಬೇಕು ಎಂದರು.

ಎಸ್.ಕೆ. ಇವೆಂಟ್ ಮ್ಯಾನೇಜ್ಮೆಂಟ್‌ನ ಸದಸ್ಯ ಶೀತಲ್ ಓಲೇಕಾರ ಮಾತನಾಡಿ, ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲೇ ಚದುರಂಗದ ಆಟಕ್ಕೆ ಉತ್ತೇಜನ ನೀಡಬೇಕು ಎನ್ನುವ ಕಾರಣಕ್ಕಾಗಿ ಮತ್ತು ಜನರಲ್ಲಿ ಚೆಸ್ ಜಾಗೃತಿ ಮೂಡಲಿ ಎನ್ನುವ ಕಾರಣಕ್ಕೆ ಎಸ್.ಕೆ. ಇವೆಂಟ್ ಮ್ಯಾನೇಜ್ಮೆಂಟ್ ಪ್ರಥಮ ಬಾರಿಗೆ ಗಜೇಂದ್ರಗಡ ಸ್ಪರ್ಧೆ ಆಯೋಜಿಸಿದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ನಗರ ಸೇರಿದಂತೆ ಗದಗ, ಕುಷ್ಟಗಿ, ಲಕ್ಷ್ಮೇಶ್ವರ, ಶಿರಹಟ್ಟಿ, ಬದಾಮಿ, ಬಾಗಲಕೋಟೆ, ಹುಲಕೋಟಿ, ಯಲಬುರ್ಗಾ, ಕೊಪ್ಪಳ ಹೀಗೆ ವಿವಿಧ ಭಾಗಗಳಿಂದ ಸ್ಪರ್ಧಾಳುಗಳು ಭಾಗಿಯಾಗಿದ್ದರು. ಸ್ಪರ್ಧೆಯ ನಿರ್ಣಾಯಕರಾಗಿ ಎಸ್.ಟಿ. ಪೂಜಾರ, ಎಚ್. ಆರ್. ನಿಡಗುಂದಿ, ಕೆ.ಎಸ್. ವನ್ನಾಲ, ಆರ್. ಜಿ.ಮ್ಯಾಕಲ್, ಮುಕುಂದ ಭಗವತಿ, ಜಾಕೀರಹುಸೇನ್ ಗೋಡೆಕಾರ ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಕ್ರಾಂತಿಸೂರ್ಯ ಜೈಭೀಮ್ ಸೇನೆ ರಾಜ್ಯಾಧ್ಯಕ್ಷರು ಮಂಜುನಾಥ ರಾಠೋಡ, ಖ್ಯಾತ ಗುತ್ತಿಗೆದಾರರಾದ ಪ್ರಕಾಶ ರಾಠೋಡ, ಬಸವರಾಜ ಬಂಕದ, ಯಲ್ಲಪ್ಪ ಬಂಕದ, ಕನಕಪ್ಪ ಕಲ್ಲವಡ್ಡರ, ಲೋಕಪ್ಪ ರಾಠೋಡ, ಬಸವರಾಜ ಹಿರೇಮಠ, ಸತ್ಯವಿಥ್ಯ ಪತ್ರಿಕೆ ಸಂಪಾದಕರಾದ ಚನ್ನು ಸಮಗಂಡಿ, ವಿನಾಯಕ ಜರತಾರಿ, ಅಲಿ ಮುಧೋಳ, ಹನಮಂತಪ್ಪ ಕುರಿ, ಆಯೋಜಕರಾದ ಶೀತಲ ಓಲೇಕಾರ, ನಾಜೀಯಾ ಮುದಗಲ್, ಕಿರಣ ನಿಡಗುಂದಿ, ಪ್ರಿಯಾಂಕ, ರಮೇಶ ಲಕ್ಕಲಕಟ್ಟಿ, ಆಕಾಶ ತಾಳಿಕೋಟಿ ಸೇರಿದಂತೆ ಅನೇಕರು ಇದ್ದರು.

### ಫಲಿತಾಂಶ

ಜ್ಯೂನಿಯರ್ ವಿಭಾಗದಲ್ಲಿ ವೈಭವ ಪ್ರಥಮ ಸ್ಥಾನ, ನಂದಕುಮಾರ ದ್ವಿತೀಯ ಸ್ಥಾನ, ಅಮೃತಾ ತೃತೀಯ ಸ್ಥಾನ ಪಡೆದರು. ಸೀನಿಯರ್ ವಿಭಾಗದಲ್ಲಿ ಪ್ರಜ್ವಲ್ ಹರ್ತಿ ಪ್ರಥಮ ಸ್ಥಾನ, ಸಿ.ಎಸ್. ಗೋಗೇರಿ ದ್ವಿತೀಯ ಬಹುಮಾನ, ಕಿರಣ.ಡಿ. ತೃತೀಯ ಬಹುಮಾನ ಪಡೆದರು. ಸೀನಿಯರ್ ವಿಭಾಗದಲ್ಲಿ 38 ಜನ ಭಾಗಿಯಾಗಿದ್ದರು, ಜ್ಯೂನಿಯರ್ ವಿಭಾಗದಲ್ಲಿ 42 ಜನ ಭಾಗಿಯಾಗಿದ್ದರು. ಭಾಗಿಯಾದ ಎಲ್ಲ ಸ್ಪರ್ಧಾಳುಗಳಿಗೂ ಕಮಿಟಿಯಿಂದ ಪ್ರಶಂಸಾ ಪತ್ರವನ್ನು ನೀಡಲಾಯಿತು.

**ಕೆಎಂಯು ಸಂಘಟನೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಬಿ.ಬಿ ಅಸೂಟಿ**

# ಗ್ಯಾರಂಟಿ ಯೋಜನೆ ಸದುಪಯೋಗ ಮಾಡಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯ ಜನರು ಸದುಪಯೋಗ ಪಡಿಸಿಕೊಳ್ಳಲು

ಗದಗ ಜಿಲ್ಲಾ ಗ್ಯಾರಂಟಿ ಯೋಜನೆಯ ಅಧ್ಯಕ್ಷ ಬಿ. ಬಿ ಅಸೂಟಿ ಹೇಳಿದರು.

ಗದಗ ನಗರದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಮುಸ್ಲಿಂ ಯುನಿಟಿ ವತಿಯಿಂದ ಸಿಂಡಿಕೇಟ್ ಸದಸ್ಯತ್ವ ಹಾಗೂ ನಾಮ ನಿರ್ದೇಶನಗೊಂಡ ಗಣ್ಯರಿಗೆ ಗದಗ ಜಿಲ್ಲಾ ಘಟಕ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಸಚಿವ ಎಚ್ ಕೆ ಪಾಟೀಲ್ ಅವರ ನೇತೃತ್ವದಲ್ಲಿ ಅಲ್ಪಸಂಖ್ಯಾತರಿಗೆ ಸೂಕ್ತ ಸ್ಥಾನಮಾನ ನೀಡಲಾಗಿದ್ದು, ಅಭಿವೃದ್ಧಿಗಾಗಿ ಸದಾ ಕಾಲ ಶ್ರಮಿಸುತ್ತಿದ್ದಾರೆ ಎಂದು ಅಸೂಟಿ ಹೇಳಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಮೌಲಾನಾ ಅಬ್ದುಲ್ ಗಫೂರ್ ಪಲ್ಲೇದ್, ಮುಫ್ತಿ ಸಮದ್ ಜಕಾತಿ, ಮೌಲಾನಾ ಶಮಿಸುದ್ದೀನ ವಹಿಸಿದ್ದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರಾಷ್ಟ್ರೀಯ ಯೂತ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿವೇಕ ಯಾವಗಲ್ ಮಾತನಾಡಿ, ರಾಜ್ಯ ಹಾಗೂ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಾಗೂ ರಾಜಕೀಯವಾಗಿ ಬೆಳೆಯಬೇಕು. ಈ ನಿಟ್ಟಿನಲ್ಲಿ ಸಂಘಟನೆಯ ರಚನಾತ್ಮಕ ಕೆಲಸಗಳಿಗೆ ಜೊತೆಯಾಗಿರುವೆ ಎಂದರು.

ಧರ್ಮಗುರು ಮೌಲಾನಾ ಪಲ್ಲೇದ್ ಮಾತನಾಡಿ, ಸಮಾಜದಲ್ಲಿ ಒಗ್ಗಟ್ಟಿನಿಂದ, ಆರ್ಥಿಕವಾಗಿ ಸಬಲರಾಗಿ ಕೋಮು ಸೌಹಾರ್ದದಿಂದ ನಡೆಯಲು ಕರೆ ನೀಡಿದರು.

ಗದಗ ಜಿಲ್ಲಾ ಅಧ್ಯಕ್ಷ ಸೈಯದ್ ಖಾಲಿದ್ ಕೊಪ್ಪಳ ಎಲ್ಲರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಹಮ್ಮದ್ ಶಫಿ ಯರಗುಡಿ ಕಾರ್ಯಕ್ರಮ ನಿರೂಪಿಸಿದರು, ಜಾಫರ್ ಅಲಿ ಸೈಯದ್ ವಂದಿಸಿದರು.

ಕಾರ್ಯಕ್ರಮದಲ್ಲಿ ಅಕ್ಬರ್ ಅಲಿ ಬೇಗ್, ನ್ಯಾಯವಾದಿಗಳಾದ ಎಸ್. ಕೆ ನದಾಫ್, ಇರ್ಫಾನ್ ಡಂಬಳ, ಇಬ್ರಾಹಿಂ ಹಳ್ಳಿಕೇರಿ, ಶೌಕತ್‌ಅಲಿ ಕಾತರಕಿ, ಯಾಸಿನ್ ಬೋದ್ಲೆಖಾನ್, ರಿಯಾಜ್ ತಹಸೀಲ್ದಾರ್, ಅಬ್ದುಲ್ ಉಮಚಗಿ, ಮುನ್ನಾ ರೇಷ್ಮೆ, ಸಾಧಿಕ್, ದಾವಲ್ ತಹಸೀಲ್ದಾರ್, ಫಾರೂಕ್ ಸಿಂದಗಿ, ದಾವಲ್ ಕಂಪಲಿ, ಮತಿನ್ ಲಾಡಸಾಬನವರ್, ದಾದು ಮುಂಡರಗಿ, ಅಲ್ತಾಫ್ ಕಟ್ಟಿಮನಿ, ಇಸ್ಮಾಯಿಲ್ ಕೊಪ್ಪಳ, ಅನ್ವರ್ ಬುವಾಜಿ, ಮುನ್ನಾ ಇರಕಲ್, ಅಜಾಜ್ ಸೇರಿದಂತೆ ಸಮಾಜದ ಹಿರಿಯರು, ಯುವಕರು ಭಾಗವಹಿಸಿದ್ದರು.

ವಕ್ಫ್ ಬೋರ್ಡ್ ಅಧ್ಯಕ್ಷ ಜಿ.ಎಮ್ ದಂಡಿನ, ಗದಗ್ ಜಿಲ್ಲಾ ಗ್ಯಾರಂಟಿ ಯೋಜನೆಯ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಸಿಂಡಿಕೇಟ್ ಸದಸ್ಯ ಮೋಹನ್ ಭಜಂತ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ನಿರ್ದೇಶಕ ಬಸವರಾಜ್ ಕಡೆಮನಿ, ನಗರಸಭೆಯ ನಾಮನಿರ್ದೇಶಕ ಸದಸ್ಯರಾದ ಮಹಮ್ಮದ್ ಶಾಲಗಾರ್, ದುರ್ಗೇಶ್ ವಿಭೂತಿ, ಮೋಹನ್ ಕಟ್ಟಿಮನಿ, ಬಾಬು ನರಸಾಪೂರ, ಶರಣಪ್ಪ ಗೊಳಗೂಳಕಿ, ಆಶ್ರಯ ಸಮಿತಿಯ ಸದಸ್ಯರು ಇಮಾಮಸಾಬ್ ರೋಣದ, ಪ್ರಧಾನ ಮಂತ್ರಿ 15 ಪಾಯಿಂಟ್ ಸಮಿತಿ ಸದಸ್ಯರಾದ ರಿಯಾಜ್ ಅತ್ತಾರ್ ಹಾಗೂ ಈದ್ ಮಿಲಾದ್ ಕಮಿಟಿಯ ನೂತನ ಅಧ್ಯಕ್ಷ ಭಾಷಾಸಾಬ್ ಮಲ್ಲಸಮುದ್ರ, ಉಪಾಧ್ಯಕ್ಷ ಅಬ್ಬು ರಾಟಿ ಸೇರಿದಂತೆ ಹಲವು ಗಣ್ಯರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.


**ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಸೋಮನಗೌಡ ಪಾಟೀಲ ಮಾಹಿತಿ**

# ಪಕ್ಷ ಸಂಘಟನೆಗೆ ಸದಸ್ಯತ್ವ ಅಭಿಯಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜೆಡಿಎಸ್ ಪಕ್ಷವನ್ನು ತಳ ಮಟ್ಟದಿಂದ ಮತ್ತೊಮ್ಮೆ ಸಂಘಟಿಸುವ ಉದ್ದೇಶದೊಂದಿಗೆ ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಜೆಡಿಎಸ್ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಸೋಮನಗೌಡ ಪಾಟೀಲ (ಅಪ್ಪಾಜಿಗೌಡ) ಹೇಳಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ರೈತರ ಪರವಾಗಿರುವ ಏಕೈಕ ಪಕ್ಷವೆಂದರೆ ಅದು ಜೆಡಿಎಸ್ ಮಾತ್ರ. ಅದಕ್ಕಾಗಿ ರಾಜ್ಯದ ಜನರು ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಪಕ್ಷ ಅಧಿಕಾರಕ್ಕೆ ಬರಬೇಕು ಎಂದು ಬಯಸುತ್ತಿದ್ದಾರೆ. ಜನರ ಬಯಕೆಯಂತೆ ಪ್ರತಿ ಬೂತ್ ಮಟ್ಟದಲ್ಲಿಯೂ ಪಕ್ಷವನ್ನು ಸಂಘಟನೆ ಮಾಡಿ, ಮುಂಬರುವ ಜಿ.ಪಂ, ತಾ.ಪಂ ಚುನಾವಣೆಗಳಲ್ಲಿ ಪಕ್ಷವನ್ನು ಅಕಾರಕ್ಕೆ ತರುವ ಪ್ರಯತ್ನವನ್ನು ನಮ್ಮ ಪಕ್ಷದ ಎಲ್ಲಾ ಮುಖಂಡರು ಮಾಡಲಿದ್ದಾರೆ ಎಂದರು.




ನಾಗಠಾಣ ಕ್ಷೇತ್ರದ ಮಾಜಿ ಶಾಸಕ, ಗದಗ ಉಸ್ತುವಾರಿ ದೇವಾನಂದ ಚವಾಣ ಮಾತನಾಡಿ, ಸದಸ್ಯತ್ವ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ನಡೆಯುತ್ತಿದೆ. ಗದಗ ಜಿಲ್ಲೆಗೆ ವಿಶೇಷ ಆದ್ಯತೆ ನೀಡಿ ಪಕ್ಷವನ್ನು ಬಲವರ್ಧನೆ ಮಾಡುವುದಕ್ಕಾಗಿ ಸಂಘಟನೆಗೆ ಒತ್ತು ನೀಡಲಾಗಿದೆ ಎಂದರು.

ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಮಾತನಾಡಿ, ಈ ಹಿಂದೆ ಮನೆ ಮನೆಗೂ ಕುಮಾರಸ್ವಾಮಿ ಕಾರ್ಯಕ್ರಮದ ರೀತಿಯಲ್ಲಿಯೇ ಜೆಡಿಎಸ್ ಸದಸ್ಯತ್ವ ಅಭಿಯಾನ ನಡೆಯಲಿದೆ. ಗದಗ ಮತಕ್ಷೇತ್ರದಲ್ಲಿ ಸುಮಾರು 50 ಸಾವಿರ ಸದಸ್ಯರನ್ನು ಮಾಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.


ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ, ಶಂಕ್ರಣ್ಣ ಬಾಳಿಕಾಯಿ, ಮಂಜುಳಾ ಮೇಟಿ, ಜೋಸೆಫ್ ಉದೋಜಿ, ದೇವೇಂದ್ರಪ್ಪ ಮಲ್ಲಸಮುದ್ರ, ಎಂ.ಎಸ್. ಪರ್ವತಗೌಡ್ರ, ಪ್ರಫುಲ್ ಪುಣೇಕರ, ಪ್ರವೀಣ ಬಾಳಿಕಾಯಿ, ಮಂಜುನಾಥ ದೊಡ್ಡಮನಿ, ಸಿದ್ದಣ್ಣ ಹೊಂಬಾಳಿಮಠ, ಆನಂದ ಹಂಡಿ ಮುಂತಾದವರು ಹಾಜರಿದ್ದರು.

# ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ, ಬೆಂಗಳೂರ 2024–25ನೇ ಸಾಲಿನ ಆಯವ್ಯಯ ಕಂಡಿಕೆ 56 (3) ರಲ್ಲಿ ಘೋಷಿಸಿರುವ ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ಪಡೆಯಲು ಗದಗ ಜಿಲ್ಲೆಯಲ್ಲಿರುವ ಕನಿಷ್ಠ 20 ಕ್ಕಿಂತ ಹೆಚ್ಚು ಕುರಿ/ ಮೇಕೆಗಳನ್ನು ಹೊಂದಿರುವ ಅರ್ಹ ಸಂಚಾರಿ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ತಮ್ಮ ವ್ಯಾಪ್ತಿಯ ಪಶು ಚಿಕಿತ್ಸಾಲಯ/ ಪಶು ಆಸ್ಪತ್ರೆಯಿಂದ ಅರ್ಜಿಗಳನ್ನು ಪಡೆದು, ವಲಸೆ ಹೋಗುವದಕ್ಕೆ ಸಂಬಂಧಪಟ್ಟಂತೆ ಸ್ಥಳೀಯ ಗ್ರಾಮ ಲೆಕ್ಕಾಧಿಕಾರಿಗಳಿಂದ ಮಹಜರ್ ಪ್ರಮಾಣ ಪತ್ರ ಪಡೆದು, ಸೂಕ್ತ ದಾಖಲಾತಿಗಳೊಂದಿಗೆ ಸೆ. 30 ರೊಳಗೆ ಭರ್ತಿ ಮಾಡಿದ ಅರ್ಜಿಯನ್ನು ಅದೇ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ. ಗದಗ ಪಶು ಆಸ್ಪತ್ರೆ ಆವರಣ ಗದಗ ಇವರನ್ನು ಕಚೇರಿಯ ವೇಳೆಯಲ್ಲಿ (ದೂರವಾಣಿ ಸಂ:9480131475, 9663570842)ಸಂಪರ್ಕಿಸಬಹುದಾಗಿದೆ.

# ಆಡಳಿತಾತ್ಮಕ ಸುಧಾರಣೆಗೆ ಆದ್ಯತೆ ನೀಡಿ



**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪಟ್ಟಣದ ಸಮಗ್ರ ಅಭಿವೃದ್ಧಿ ಸೇರಿದಂತೆ ಪಟ್ಟಣದ ಸೌಂದರ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಯುವ ಮುಖಂಡ ಹಾಗೂ ಪುರಸಭೆ ಸದಸ್ಯ ಸಂಗನಗೌಡ ಪಾಟೀಲ ಹೇಳಿದರು.

ಅವರು ಸೋಮವಾರ ಪುರಸಭೆಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರಾಗಿ ಆಯ್ಕೆಗೊಂಡ ಅಭ್ಯರ್ಥಿಗಳನ್ನು ಸನ್ಮಾನಿಸಿ ಮಾತನಾಡಿದರು.

ಅಧ್ಯಕ್ಷರಾಗಿ ಆಯ್ಕೆಯಾದ ಗೀತಾ ಮಾಡಲಗೇರಿ ಮತ್ತು ಉಪಾಧ್ಯಕ್ಷರಾಗಿ ಆಯ್ಕೆಯಾದ ದುರ್ಗಪ್ಪ ಹಿರೇಮನಿಯವರನ್ನು ಕುರಿತು, ಎಲ್ಲ 23 ವಾರ್ಡ್‌ಗಳ ಸದಸ್ಯರನ್ನು ವಿಶ್ವಾಸಕ್ಕೆ ಪಡೆದುಕೊಂಡು ಪಕ್ಷ ಬೇಧ ಮರೆತು ಪಟ್ಟಣದ ಅಭಿವೃದ್ಧಿಗೆ ಶ್ರಮಿಸಬೇಕು. ಮುಖ್ಯವಾಗಿ ಕಚೇರಿಯ ಆಡಳಿತಾತ್ಮಕ ಸುಧಾರಣೆಗೆ ಆದ್ಯತೆ ಒದಗಿಸುವ ಮೂಲಕ ಸಕಾಲಕ್ಕೆ ನಾಗರಿಕರ ಕೆಲಸಗಳು ಆಗುವಂತೆ ಕ್ರಮ ತೆಗೆದುಕೊಳ್ಳಬೇಕು ಎಂದರು.

ರೋಣ ಪುರಸಭೆಗೆ ಒಟ್ಟು 23 ಸದಸ್ಯರುಗಳಿದ್ದು, ಕಾಂಗ್ರೆಸ್ 16 ಹಾಗೂ ಬಿಜೆಪಿ 7 ಸದಸ್ಯರುಗಳನ್ನು ಹೊಂದಿದೆ. ಶಾಸಕ ಜಿ.ಎಸ್. ಪಾಟೀಲರ ಮಾರ್ಗದರ್ಶನದಂತೆ ಗೀತಾ ಮಾಡಲಗೇರಿ ಅಧ್ಯಕ್ಷರಾಗಿ ಹಾಗೂ ದುರ್ಗಪ್ಪ ಹಿರೇಮನಿ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾ ಕಾರ್ಯವನ್ನು ತಹಸೀಲ್ದಾರ್ ನಾಗರಾಜ ಕೆ ಕಾರ್ಯ ನಿರ್ವಹಿಸಿದರು. ಸಿಪಿಐ ಎಸ್.ಎಸ್. ಬಿಳಗಿ ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು. ಇದೇ ಸಂದರ್ಭದಲ್ಲಿ ಅಭಿಮಾನಿಗಳು ವಿಜಯೋತ್ಸವ ಆಚರಿಸಿದರು. ಮುಖಂಡರಾದ ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಬಸವರಾಜ ನವಲಗುಂದ, ಶಫೀಕ ಮೂಗನೂರ, ಆನಂದ ಚಂಗಳಿ, ಸಂಗು ನವಲಗುಂದ, ಗದಿಗೆಪ್ಪ ಕಿರೇಸೂರ, ಮೌನೇಶ ಹಾದಿಮನಿ, ಸಂಜಯ ದೊಡ್ಡಮನಿ, ವಿನಾಯಕ ಜಕ್ಕಣಗೌಡ್ರ ಸೇರಿದಂತೆ ಪುರಸಭೆಯ ಸದಸ್ಯರು, ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

**ಸೆಪ್ಟೆಂಬರ್ 14ರಂದು ರಾಷ್ಟ್ರೀಯ ಲೋಕ ಅದಾಲತ್ : ನ್ಯಾ.ಮೂ ಬಸವರಾಜ ಮಾಹಿತಿ**

# ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಸದಾವಕಾಶ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದನ್ವಯ ಜಿಲ್ಲೆಯಲ್ಲಿ ಸೆಪ್ಟೆಂಬರ್ 14ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಸದಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ತಿಳಿಸಿದರು.

ಜಿಲ್ಲಾ ನ್ಯಾಯಾಲಯ ಸಂಕೀರ್ಣದ ವಿಡಿಯೋ ಕಾನ್ಫರನ್ಸ್ ಹಾಲ್‌ನಲ್ಲಿ ಸೋಮವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮತ್ತು ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು ಹಾಗೂ ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದರು.



ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚಿನಂತೆ ಒಟ್ಟು 14 ಬೆಂಚ್‌ಗಳನ್ನು ರಚಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಒಟ್ಟು 20469 ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 5349 ಪ್ರಕರಣಗಳನ್ನು ಗುರುತಿಸಿದೆ. ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ ಎಂದು ನ್ಯಾ.ಮೂ ಬಸವರಾಜ ತಿಳಿಸಿದರು.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಸೆಪ್ಟೆಂಬರ್ 14 ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಬಹುದಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ವಾರ್ತಾಧಿಕಾರಿ ವಸಂತ ಮಡ್ಲೂರ ಉಪಸ್ಥಿತರಿದ್ದರು.

> ವ್ಯಾಜ್ಯಮುಕ್ತ ಗ್ರಾಮ ಮಾಡಲು ಈಗಾಗಲೇ ಜಿಲ್ಲೆಯಲ್ಲಿನ ಕಡಿಮೆ ಪ್ರಕರಣಗಳು ಇರುವ 51 ಗ್ರಾಮಗಳನ್ನು ಗುರುತಿಸಲಾಗಿದೆ. ಇವುಗಳ ಪೈಕಿ 10ರಿಂದ 15 ಗ್ರಾಮಗಳನ್ನು ವ್ಯಾಜ್ಯಮುಕ್ತ ಗ್ರಾಮಗಳೆಂದು ಪ್ರಕಟಿಸಲಾಗುವುದು. 51 ಗ್ರಾಮಗಳ ಪೈಕಿ ಲಕ್ಷ್ಮೇಶ್ವರ ತಾಲೂಕಿನ 21 ಗ್ರಾಮಗಳು, ಗದಗ ತಾಲೂಕಿನ 3 ಗ್ರಾಮಗಳನ್ನು ವ್ಯಾಜ್ಯ ಮುಕ್ತ ಗ್ರಾಮಗಳನ್ನಾಗಿಸಲು ಗುರುತಿಸಲಾಗಿದೆ. ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜೀ ಸಂಧಾನಗಳ ಮೂಲಕ ವ್ಯಾಜ್ಯ ಮುಕ್ತ ಗ್ರಾಮಗಳನ್ನಾಗಿಸಲು ಪ್ರಯತ್ನಿಸಲಾಗುವುದು ಎಂದು ನ್ಯಾ.ಮೂ ಬಸವರಾಜ ತಿಳಿಸಿದರು.

## ಜಿ.ಪಿ.ಎಲ್ 2ನೆ ಆವೃತ್ತಿ ಆರಂಭ

**■ ವಿಜಯಸಾಕ್ಷಿ ಸುದ್ದಿ, ಗದಗ**




ಗದಗ ಪ್ರೀಮಿಯರ್ ಲೀಗ್–2024ರ ಆವೃತ್ತಿ ಲೆದರ್ ಬಾಲ್ ಕ್ರಿಕೆಟ್ ಆರಂಭವಾಗಲಿದ್ದು, ಸೆಪ್ಟೆಂಬರ್ 11ನೇ ತಾರೀಖು ನೋಂದಣಿ ಮಾಡಿಸಿ ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ ಎಂದು ಜಿಪಿಎಲ್ ಕಮಿಟಿಯ ಸದಸ್ಯರು ತಿಳಿಸಿದ್ದಾರೆ. ನೋಂದಣಿ ಮಾಡಿಸಲು ಶಿವರಾಜ ಕರಡಿ (9886360438) ಮತ್ತು ಅಸ್ಲಂ ಮುಧೋಳ (9739567030) ಅವರನ್ನು ಸಂಪರ್ಕಿಸಬೇಕು.

ಜಿ.ಪಿ.ಎಲ್ ಕ್ರಿಕೆಟ್ ಲೀಗ್ ಗದಗ ಜಿಲ್ಲೆಯ ಕ್ರಿಕೆಟ್ ಕ್ರೀಡಾಪಟುಗಳಿಗೆ ಸೀಮಿತವಾಗಿರುತ್ತದೆ. ಇದು ಆಕ್ಷನ್ ಬೇಸ್ಡ್ ಕ್ರಿಕೆಟ್ ಲೀಗ್ ಆಗಿರುತ್ತದೆ. ಇದೇ ತಿಂಗಳು ಕೊನೆಯ ವಾರದಲ್ಲಿ ಹರಾಜು ಪ್ರಕ್ರಿಯೆ ನಡೆಯಲಿದೆ ಹಾಗೂ ಅಕ್ಟೋಬರ್ ತಿಂಗಳಲ್ಲಿ ಜಿ.ಪಿ.ಎಲ್ ಕ್ರಿಕೆಟ್ ಟೂರ್ನಿಯನ್ನು ಆಯೋಜಿಸಲಾಗುತ್ತದೆ ಎಂದು ಜಿ.ಪಿ.ಎಲ್. ಕಮಿಟಿ ಸದಸ್ಯರು ತಿಳಿಸಿದ್ದಾರೆ.

ಜಿಲ್ಲೆಯ ಕ್ರಿಕೆಟ್ ಪಟುಗಳು ಆದಷ್ಟು ಬೇಗ ತಮ್ಮ ಹೆಸರುಗಳನ್ನು ನೋಂದಣಿ ಮಾಡಿಸಿ ಅರ್ಜಿ ಸಲ್ಲಿಸಬೇಕು. ಗದಗ ಜಿಲ್ಲೆಯಲ್ಲಿ ಲೆದರ್ ಬಾಲ್ ಕ್ರಿಕೆಟ್ ಕ್ರೀಡೆಯನ್ನು ಬೆಳೆಸಲು ಇದು ಒಂದು ಸದಾವಕಾಶವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಸನ್ಮಾರ್ಗದಲ್ಲಿದ್ದರೆ ಸನ್ಮಾನಗಳು ಪ್ರಾಪ್ತಿ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮಾಜದಲ್ಲಿ ಯಾರು ಸನ್ಮಾರ್ಗದಲ್ಲಿ ನಡೆಯುತ್ತಾರೋ ಅವರಿಗೆ ಸನ್ಮಾನಗಳು ಕಟ್ಟಿಟ್ಟ ಬುತ್ತಿ. ಕಾಯಾ, ವಾಚಾ, ಮನಸ್ಸಿನಿಂದ ಯಾರು ಸಮಾಜ ಸೇವೆಗಳನ್ನು ಮಾಡುತ್ತಾರೆಯೋ ಅವರು ಎಂದಿಗೂ ಸಮಾಜದಲ್ಲಿ ಗೌರವಾನ್ವಿತರಾಗಿರುತ್ತಾರೆ. ಇಂಥವರು ಧಾರ್ಮಿಕ ಕಾರ್ಯಗಳಲ್ಲಿ ಹೆಚ್ಚುಹೆಚ್ಚಾಗಿ ತೊಡಗಿಕೊಳ್ಳುವದರಿಂದ ಅವರಲ್ಲಿನ ಆಧ್ಯಾತ್ಮಿಕ ಶಕ್ತಿಯೂ ಹೆಚ್ಚಾಗುತ್ತದೆ ಎಂದು ಸಿದ್ದರಬೆಟ್ಟ ಮತ್ತು ಅಬ್ಬಿಗೇರಿ ಹಿರೇಮಠದ ಷ. ಬ್ರ. ಶ್ರೀ ವೀರಭದ್ರ ಶಿವಾಚಾರ್ಯರು ಹೇಳಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಕರ್ನಾಟಕ ರಾಜ್ಯ ಘಟಕದ ಕಾರ್ಯನಿರ್ವಾಹಕ ಸಮಿತಿಯ ಸದಸ್ಯರಾಗಿ ಆಯ್ಕೆಗೊಂಡ ಮಿಥುನ್ ಪಾಟೀಲ ಅವರನ್ನು ಹಿರೇಮಠದಲ್ಲಿ ಸನ್ಮಾನಿಸಿ ಅವರು ಆಶೀರ್ವಚನ ನೀಡಿದರು.

ಸತ್ಕಾರ್ಯಗಳು ಮಾನವನನ್ನು ಪರಿಶುದ್ಧಗೊಳಿಸುತ್ತವೆ. ಸಮಾಜ ಸೇವೆ ಮಾಡಲು ಅಧಿಕಾರ ಮುಖ್ಯವಲ್ಲ. ಅಧಿಕಾರ ಶಾಶ್ವತವೂ ಅಲ್ಲ. ಅಧಿಕಾರ ಇರಲಿ, ಇಲ್ಲದಿರಲಿ ಸದಾಕಾಲ ಜನರ ಸೇವೆ ಮಾಡುವ ಗುಣವನ್ನು ಬೆಳೆಸಿಕೊಳ್ಳಬೇಕು. ಎಲ್ಲ ಕಾಲದಲ್ಲಿಯೂ ನಿಸ್ವಾರ್ಥತೆಯಿಂದ ಸಮಾಜ ಸೇವೆ ಮಾಡುವವರನ್ನು ಸಮಾಜ ಎಂದಿಗೂ ನೆನಪಿನಲ್ಲಿಟ್ಟುಕೊಳ್ಳುತ್ತದೆ ಎಂದು ಶ್ರೀಗಳು ತಿಳಿಸಿದರು.

ಈ ಸಂದರ್ಭದಲ್ಲಿ ಸೊರಟೂರಿನ ಷ. ಬ್ರ. ಶ್ರೀ ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ನಾಗವಂದ ಶ್ರೀಗಳು, ತಮ್ಮಡಿಹಳ್ಳಿ ಶ್ರೀಗಳು, ಸುರೇಶ ಬಸವರಡ್ಡೇರ, ಬಸವರಾಜ ಪಲ್ಲೇದ, ಎ.ವಿ. ವೀರಾಪೂರ, ವೀರನಗೌಡ ಪಾಟೀಲ, ಸೋಮನಗೌಡ ಕಣವಿ, ಜಗದೀಶ ಅವರೆಡ್ಡಿ, ಭರಮಪ್ಪ ಹನುಮನಾಳ, ಸಿದ್ದು ಹನುಮನಾಳ, ಮುತ್ತಪ್ಪ ಕುಕನೂರ, ಬಸವರಾಜ ಚವಡಿ, ಮಹಾದೇವಪ್ಪ ಕಂಬಳಿ, ಶಿವಪುತ್ರಪ್ಪ ತೆಗ್ಗಿನಕೇರಿ, ಎ.ಕೆ. ಮಳಗಿ, ಸೋಮು ಶಿರೋಳ, ಕುಮಾರ ಬಸವರಡ್ಡೇರ, ಕುಮಾರ ಭೀಮನಗೌಡ್ರ, ಸಂಗಪ್ಪ ಕುಂಬಾರ, ಗುರುಲಿಂಗಪ್ಪ ಬಸವರಡ್ಡೇರ, ಚನ್ನಬಸು ಹೂಗಾರ, ಅಂದಪ್ಪ ಹಲಕುರ್ಕಿ, ಹರ್ಷ ಅವರೆಡ್ಡಿ, ಮುತ್ತಪ್ಪ ಅವರೆಡ್ಡಿ, ದೇವನಗೌಡ ಮುನೇನಕೊಪ್ಪ, ಮಂಜು ಆರಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ಸೆ.14ರಂದು ಸತ್ಯನಾರಾಯಣ ಪೂಜೆ




**■ ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಸಿದ್ಧಲಿಂಗ ನಗರದ ಎಂಜಿ 2 ಬಡಾವಣೆಯ ಸುವರ್ಣ ಸ್ವಾತಂತ್ರ್ಯೋತ್ಸವ ಉದ್ಯಾನವನದಲ್ಲಿ ಶ್ರೀ ಜಾಗೃತ ಗಜಾನನ ಯುವಕ ಮಂಡಳಿಯ 31ನೇ ವರ್ಷದ ಶ್ರೀ ಗಜಾನನ ಪ್ರತಿಷ್ಠಾಪನೆ ಅಂಗವಾಗಿ ಸೆ.14ರಂದು ಸತ್ಯನಾರಾಯಣ ಪೂಜೆ ಹಮ್ಮಿಕೊಳ್ಳಲಾಗಿದೆ. ಪೂಜೆಯ ನಂತರ ಮಧ್ಯಾಹ್ನ ಮಹಾ ಅನ್ನಸಂತರ್ಪಣೆ ನಡೆಯಲಿದೆ. 15-09-2024ರಂದು ಒಂಬತ್ತನೇ ದಿನದಂದು ಗಣಪತಿ ವಿಸರ್ಜನಾ ಮೆರವಣಿಗೆ ನೆರವೇರುವುದು ಎಂದು ಶ್ರೀ ಜಾಗೃತ ಗಜಾನನ ಯುವಕ ಮಂಡಳಿಯ ಅಧ್ಯಕ್ಷ ಡಾ ಜಯಕುಮಾರ ಶಿ ಬ್ಯಾಳಿ, ಉಪಾಧ್ಯಕ್ಷ ಸಿದ್ದು ಅಂದಾನಗೌಡ್ರ, ಖಜಾಂಚಿ ಮಂಜುನಾಥ ಅಂಗಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 35ನೇ ವರ್ಷದ ಶ್ರೀ ಗಜಾನನೋತ್ಸವ

**■ ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿಯ ಹೆಲ್ತ್‌ಕ್ಯಾಂಪ್‌ನ ಯುವಕ ಸಂಘದಿಂದ 35ನೇ ವರ್ಷದ ಶ್ರೀ ಗಜಾನನೋತ್ಸವವನ್ನು ಆಚರಿಸಲಾಗುತ್ತಿದೆ. ಈ ಹಿಂದೆ ಬೃಂದಾವನ ಗಾರ್ಡನ್, ಜೋಗ್ ಫಾಲ್ಸ್, ಟೈಟಾನಿಕ್ ಬೋಟ್, ಆಂತರಿಕ್ಷದಲ್ಲಿ ಗಣೇಶನ ದರ್ಶನ, ಹೀ ಮ್ಯಾನ್, ಮ್ಯೂಸಿಕಲ್ ಫೌಂಟನ್ ಹೀಗೆ ಹತ್ತು ಹಲವಾರು ಸುಂದರ ಸನ್ನಿವೇಶಗಳನ್ನು ಮಾಡಿ ಗಮನ ಸೆಳೆದಿತ್ತು.



ಸದರಿ ಯುವಕ ಸಂಘದ ಮೋಹನ ಕಬಾಡಿ, ಲಿಂಗರಾಜ ಬಗಲಿ, ಕಿಶೋರ ಮುದಗಲ್, ಅರವಿಂದ ಹುಲ್ಲೂರ, ಬಸವರಾಜ ನೀರೇರ, ಸುನೀಲ ತೆಂಬದಮನಿ, ಅನಿಲ ತೆಂಬದಮನಿ, ಶಂಕರ ಹಾನಗಲ್, ಸುದರ್ಶನ ಹಾನಗಲ್, ಬನೇಶ ಕುಲಕರ್ಣಿ, ಅಜೀತ ಕುಲಕರ್ಣಿ, ಚಂದ್ರಕಾಂತ ಹಾನಗಲ್, ಕಾಂತೇಶ ಹಾನಗಲ್, ಸಿದ್ಧಾರ್ಥ ಬಗಲಿನವರ, ಆಕಾಶ ಚಾಟೆ, ಸಮರ್ಥ ತೆಂಬದಮನಿ, ವಿಶ್ವನಾಥ ಅಂಗಡಿ, ರಜತ ತೆಂಬದಮನಿ, ದರ್ಶನ್ ಪಟೇಲ್, ವೈಭವ ಮುದಗಲ್, ಪ್ರಜ್ವಲ್ ಹುಲ್ಲೂರ, ಗೌರವ ಹಬೀಬ ಇವರುಗಳು ಗಣೇಶ ಪ್ರತಿಷ್ಠಾಪಣೆಯ ಸಂದರ್ಭದಲ್ಲಿ ಶ್ರಮಿಸುತ್ತಿದ್ದಾರೆ.

## ಗ್ರಾಮೀಣ ಕ್ರೀಡೆ ಉಳಿಸುವುದು ನಮ್ಮೆಲ್ಲರ ಕರ್ತವ್ಯ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇತ್ತೀಚಿನ ದಿನಗಳಲ್ಲಿ ಟಿವಿ, ಮೊಬೈಲ್, ಸಮಾಜಿಕ ಜಾಲತಾಣಗಳ ಭರಾಟೆಯಲ್ಲಿ ಗ್ರಾಮೀಣ ಕ್ರೀಡೆಗಳು ಮರೆಯಾಗುತ್ತಿವೆ. ಇಂತಹ ಸಂದರ್ಭದಲ್ಲಿ ನಮ್ಮ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ, ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಹಾಲಕೆರೆ ಗ್ರಾಮ ಪಂಚಾಯತ್ ಅಧ್ಯಕ್ಷ ಗಿರೀಶಗೌಡ ಮುಲ್ಕಿಪಾಟೀಲ ಹೇಳಿದರು.



ಸಮೀಪದ ಹಾಲಕೆರೆ ಗ್ರಾಮದಲ್ಲಿ ಗಣೇಶೋತ್ಸವದ ಅಂಗವಾಗಿ ಶ್ರೀ ಗಜಾನನ ಗೆಳೆಯರ ಬಳಗ ಆಯೋಜಿಸಿದ್ದ ನಿಧಾನಗತಿ ಬೈಕ್ ಓಡಿಸುವ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ಕ್ರೀಡಾಭಿಮಾನ ಮೂಡುವ ಜತೆಗೆ ಮಾನಸಿಕ, ದೈಹಿಕ ಆರೋಗ್ಯ ವೃದ್ಧಿಗೆ ಸಹಕಾರಿಯಾಗುವುದು. ಗೆಲುವಿಗೆ ಪ್ರಯತ್ನಿಸುವ ರೀತಿ ವಿಶೇಷವಾಗಿರುತ್ತದೆ. ಕೆಲ ಜನಪ್ರಿಯ ಕ್ರೀಡೆಗಳ ನಡುವೆ ಗ್ರಾಮೀಣ ಕ್ರೀಡೆಗಳು ಸ್ಪರ್ಧೆ ಮಾಡಲು ಆಗದೆ ಸೊರಗುತ್ತಿವೆ. ಇಂತಹ ಕ್ರೀಡೆಗಳನ್ನು ಆಯೋಜಿಸುವುದರಿಂದ ನಮ್ಮ ಗ್ರಾಮೀಣ ಕ್ರೀಡೆಗಳ ಬಗ್ಗೆ ಜನರಲ್ಲಿ ಅರಿವು ಮೂಡುತ್ತದೆ. ಸ್ಪರ್ಧೆಯನ್ನು ಪ್ರೋತ್ಸಾಹಿಸಿ ಕ್ರಿಕೆಟ್‌ನಂತೆ ಜನಪ್ರಿಯಗೊಳಿಸಬೇಕಿದೆ. ಕ್ರೀಡೆಗಳು ನಮ್ಮನ್ನು ಆರೋಗ್ಯವಾಗಿರುವಂತೆ ಮಾಡುತ್ತವೆ. ಯುವಕರು ತಮ್ಮಲ್ಲಿರುವ ಪ್ರತಿಭೆಯನ್ನು ಹೊರ ತರಲು ಕ್ರೀಡೆಗಳು ಸಹಕಾರಿಯಾಗಿವೆ. ಅದನ್ನು ಸದುಪಯೋಗಪಡಿಸಿಕೊಳ್ಳುವದು ನಿಮ್ಮ ಆದ್ಯ ಕರ್ತವ್ಯವಾಗಲಿ ಎಂದರು.

ಈ ಸಂದರ್ಭದಲ್ಲಿ ವ್ಯವಸಾಯ ಸಹಕಾರಿ ಸಂಘದ ಅಧ್ಯಕ್ಷ ಅಂದಾನಗೌಡ ಪಾಟೀಲ್, ಶರಣಪ್ಪ ಜವಳಗೇರಿ, ಅಂದಾನಗೌಡ ಪಾಯಪ್ಪಗೌಡರ, ವೆಂಕಟೇಶ ಹಳ್ಳಿ,ಶರಣಪ್ಪ ರಟ್ಟಿ, ಪ್ರವೀಣ ಬೈರಗೊಂಡ, ರಾಘು ಕುರಿ, ನವೀನ ಮಾದಿನೂರ, ಕುಮಾರ ಕರಡಿ, ಅಭಿಷೇಕ್ ಪೂಜಾರ, ನವೀನ ಹುಲ್ಲಣ್ಣವರ, ಮಂಜು ಶಿರೂರ, ಸಂಗಪ್ಪ ರೊಟ್ಟಿ, ವೆಂಕರಡ್ಡಿ ಹಳ್ಳಿ, ಪ್ರಕಾಶ ಸೊಬರದ, ಕಾರ್ತಿಕ ಪೂಜಾರ, ನಿಂಗಪ್ಪ ಕಡೆತೋಟದ ಮುಂತಾದವರು ಉಪಸ್ಥಿತರಿದ್ದರು.

## ನಿಧನ ವಾರ್ತೆ

### ಯಲ್ಲಮ್ಮ ಚಕ್ಕಡಿ



ಡಂಬಳ: ಗ್ರಾಮದ ಹಾಲುಮತ ಸಮಾಜದ ಹಿರಿಯರಾದ ಯಲ್ಲಮ್ಮ ಮಲ್ಲಪ್ಪ ಚಕ್ಕಡಿ(78) ಸೋಮವಾರ ನಿಧನರಾದರು. ಮೃತರು ಮೂರು ಜನ ಪುತ್ರರು, ಮೂವರು ಪುತ್ರಿಯರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

**5 ಕೋಟಿ ರೂ. ವೆಚ್ಚದಲ್ಲಿ 13 ಅರಕ್ಷಿತ ಸ್ಮಾರಕಗಳ ಸಂರಕ್ಷಣೆ ಕಾಮಗಾರಿಗಳ ಶಿಲಾನ್ಯಾಸ ಸಮಾರಂಭ**

# ಶಿಲ್ಪಕಲೆಗಳ ರಕ್ಷಣೆಗೆ ಪ್ರತಿಯೊಬ್ಬರೂ ಮುಂದಾಗಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿ ಜೀವನದಿಂದ ಲಕ್ಕುಂಡಿ ಬಗ್ಗೆ ಅಭಿಮಾನ ಹೊಂದಿ ಮೊದಲ ಬಾರಿ ಶಾಸಕನಾದ ಸಂದರ್ಭದಲ್ಲಿ ಆಗಬೇಕಾಗಿರುವ ಅಭಿವೃದ್ಧಿ, ಸಂಶೋದನೆ ಬಗ್ಗೆ ಹತ್ತು ಹಲವು ಕನಸುಗಳನ್ನು ಕಂಡಿದ್ದೆ. ಅಂತಹ ಕನಸುಗಳನ್ನು ನನಸು ಮಾಡಲು ಆ ಭಗವಂತ ನಿಮ್ಮ ಮೂಲಕ ಈ ಸುವರ್ಣಾವಕಾಶ ಒದಗಿಸಿದ್ದಾನೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಹೇಳಿದರು.

ಲಕ್ಕುಂಡಿಯ ಹಾಲಗುಂಡಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಮೈಸೂರಿನ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಸಹಯೋಗದಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ 13 ಅರಕ್ಷಿತ ಸ್ಮಾರಕಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾಮಗಾರಿಗಳ ಶಿಲಾನ್ಯಾಸ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಕಲ್ಯಾಣ ಚಾಲುಕ್ಯ ಕಾಲದಲ್ಲಿ ಅದ್ಭುತ ಶಿಲ್ಪಕಲೆಗಳನ್ನು ಅಗೌರವದಿಂದ ನೋಡಲಾಗುತ್ತಿದೆ. ಇಂದಿನ ದಿನದಲ್ಲೂ ತಿಪ್ಪೆಯನ್ನು ಅಗೆದರೆ 20ಕ್ಕೂ ಹೆಚ್ಚು ಶಿಲ್ಪಕಲೆಗಳು ಸಿಗುತ್ತವೆ. ಕಟ್ಟೆಯನ್ನು ಅಗೆದರೂ ಮ್ಯೂಸಿಯಂ ಹಿಡಿಸಲಾಗದಷ್ಟು ಪಾರಂಪರಿಕ ಶಿಲ್ಪಕಲೆಗಳು ದೊರೆಯುತ್ತವೆ. ಆದ್ದರಿಂದ ಗ್ರಾಮಸ್ಥರು, ಯುವಕರು ಶಿಲ್ಪಕಲೆಗಳ ರಕ್ಷಣೆಗೆ ಮುಂದಾಗಬೇಕು ಎಂದು ಹೇಳಿದರು.



ಕರ್ನಾಟಕದಲ್ಲಿ ಸುಮಾರು 25 ಸಾವಿರ ಸ್ಮಾರಕಗಳಿವೆ. ಅವೆಲ್ಲವನ್ನು ಸರ್ಕಾರದಿಂದ ಅಭಿವೃದ್ಧಿಗೊಳಿಸುವುದರ ಜೊತೆಗೆ ಊರಿನ ಮತ್ತು ಸ್ಮಾರಕಗಳ ಬಗ್ಗೆ ಅಭಿಮಾನ ಹೊಂದಿ ಅಮೇರಿಕದಲ್ಲಿರುವ ಕನ್ನಡಿಗರು ಮುಂದೆ ಬಂದು ದತ್ತು ತೆಗೆದುಕೊಳ್ಳುತ್ತಿರುವುದು ಗರ್ವ ಮತ್ತು ಹೆಮ್ಮೆಯ ವಿಷಯವಾಗಿದೆ ಎಂದು ನುಡಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಲಕ್ಕುಂಡಿಗೆ ತನ್ನದೇ ಆದ ಐತಿಹಾಸಿಕ ಸ್ಥಾನವಿದೆ. ಪಾರಂಪರಿಕ ಸ್ಮಾರಕಗಳಿಗೆ ಹೆಸರುವಾಸಿಯಾಗಿರುವ ಲಕ್ಕುಂಡಿಯಲ್ಲಿ 101 ದೇವಾಲಯ, 101 ಬಾವಿಗಳಿವೆ ಎಂಬುದು ಇತಿಹಾಸದಿಂದ ತಿಳಿದುಬಂದರೂ ಸದ್ಯ 30 ದೇವಾಲಯಗಳು, 30 ಬಾವಿಗಳು ಮಾತ್ರ ಕಂಡುಬರುತ್ತಿವೆ. ಅವುಗಳ ರಕ್ಷಣೆ ಹಾಗೂ ಅಭಿವೃದ್ಧಿ ಅಗತ್ಯವಾಗಿದೆ. ಸರಕಾರ ಯಾವುದೇ ಇರಲಿ, ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುವುದು ಗ್ರಾಮಸ್ಥರ ಜಾವಾಬ್ದಾರಿಯಾಗಿದೆ. ಸಚಿವ ಎಚ್.ಕೆ. ಪಾಟೀಲರು 5 ಕೋಟಿ ರೂ. ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿರುವುದು ಸಂತಸದ ವಿಷಯ ಎಂದರು.

ಲಕ್ಕುಂಡಿ ಗ್ರಾಮದಲ್ಲಿ ಅಪೂರ್ಣಗೊಂಡಿರುವ ಹಾಲಗೊಂಡ ಬಸವೇಶ್ವರ ಸಮುದಾಯ ಭವನ ಕಾಮಗಾರಿಗೆ ಅನುದಾನ ಒದಗಿಸುವುದು ಸೇರಿ ಪ್ರಸಕ್ತ ಸಾಲಿನ ಲಕ್ಕುಂಡಿ ಉತ್ಸವಕ್ಕೂ ಚಾಲನೆ ನೀಡಬೇಕು ಎಂದು ಸಿ.ಸಿ. ಪಾಟೀಲ ಅವರು ಸಚಿವರಿಗೆ ಮನವಿ ಮಾಡಿದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಲಕ್ಕುಂಡಿ ಪರಂಪರೆಯನ್ನು ಗುರುತಿಸಿ ಹೆಚ್ಚಿನ ಪ್ರಾತಿನಿಧ್ಯ ನೀಡಿ ಪಾರಂಪರಿಕ ಸ್ಮಾರಕಗಳನ್ನು ರಕ್ಷಿಸಿಕೊಂಡು ಬರಲಾಗುತ್ತಿದೆ ಎಂದರು.

8 ದೇವಸ್ಥಾನಗಳ ಉತಾರಗಳನ್ನು ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ ಸಚಿವ ಎಚ್.ಕೆ. ಪಾಟೀಲ ಅವರಿಗೆ ಹಸ್ತಾಂತರಿಸಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, 101 ದೇವಾಲಯ, 101 ಬಾವಿಗಳಿಗೆ ಹೆಸರಾಗಿರುವ ಲಕ್ಕುಂಡಿ ಗ್ರಾಮದ ಪಾರಂಪರಿಕ ದೇವಸ್ಥಾನಗಳ ರಕ್ಷಣೆ ಹಾಗೂ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ದೇಶದ ಸಂಪತ್ತಾಗಿರುವ ಖನಿಜ, ಆಹಾರ ದೇವಾಲಯಗಳ, ಶಿಲ್ಪಕಲೆ, ಸಂಗೀತ, ಸಾಹಿತ್ಯವನ್ನು ಸಂರಕ್ಷಣೆ ಜೊತೆಗೆ ಅಭಿವೃದ್ಧಿ ಎಲ್ಲರ ಕರ್ತವ್ಯವಾಗಿದೆ ಎಂದರು.

ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ರಾಜ್ಯ ಸಮಿತಿ ಸದಸ್ಯರಾದ ಸಿದ್ಧಲಿಂಗೇಶ್ವರ ಪಾಟೀಲ, ಅ.ದ. ಕಟ್ಟಿಮನಿ, ಮುಖಂಡರಾದ ವಿವೇಕ ಯಾವಗಲ್, ಅಶೋಕ ಮಂದಾಲಿ ಪಾಲ್ಗೊಂಡಿದ್ದರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಸ್ವಾಗತಿಸಿದರು. ಬಾಹುಬಲಿ ಜೈನರ ನಿರೂಪಿಸಿದರು.

> ಹಾಲಗುಂಡಿ ಬಸವೇಶ್ವರ ದೇವಾಲಯ ಮತ್ತು ಮಜ್ಜನ ಬಾವಿ, ಈಶ್ವರ ದೇವಾಲಯ, ಕಲ್ಮಠ ದೇವಾಲಯ ಮತ್ತು ಕಲ್ಮಠ ಬಾವಿ, ಕಣ್ಣರ ಬಾವಿ, ಕೋಟೆ ವೀರಭದ್ರೇಶ್ವರ ದೇವಾಲಯ, ಲಕ್ಷ್ಮೀನಾರಾಯಣ ದೇವಾಲಯ, ಲೆಕ್ಕದ ವೀರಣ್ಣ ದೇವಾಲಯ, ಈಶ್ವರ ಗುಡಿ ಹತ್ತಿರದ ಮಾಳಿ ಬಾವಿ, ಮಲ್ಲಿಕಾರ್ಜುನ ದೇವಾಲಯ, ನೀಲಕಂಠೇಶ್ವರ ದೇವಾಲಯ, ಸಿದ್ದೇಶ್ವರ ದೇವಾಲಯ, ಸೋಮೇಶ್ವರ ದೇವಾಲಯ, ಕಪ್ಪಲಿ ಬಾವಿ, ವಿರುಪಾಕ್ಷ ದೇವಾಲಯ ಸೇರಿ ಒಟ್ಟು 13 ಅರಕ್ಷಿತ ಸ್ಮಾರಕಗಳ ಸಂರಕ್ಷಣೆ ಕಾಮಗಾರಿಗಳಿಗೆ ಶಿಲಾನ್ಯಾಸ ನೆರವೇರಿಸಲಾಯಿತು.



ರೋಣ ತಾಲೂಕಿನ ಮಾರನಬಸರಿ ಗ್ರಾಮದ ಮಹಾದಾಸೋಹಿ ಶ್ರೀ ಶರಣಬಸವೇಶ್ವರ ಜಾತ್ರಾಮಹೋತ್ಸವ ಅದ್ದೂರಿಯಿಂದ ಜರುಗಿತು. ಜಾತ್ರೆಯ ನಿಮಿತ್ತ ಜರುಗಿದ ರಥೋತ್ಸವ ಕಾರ್ಯಕ್ರದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ರಥಕ್ಕೆ ಹೂ, ಹಣ್ಣು, ಉತ್ತತ್ತಿಗಳನ್ನು ಎಸೆದು ತಮ್ಮ ಇಷ್ಟಾರ್ಥಗಳನ್ನು ಈಡೇರಿಸುವಂತೆ ತ್ರಿವಿಧ ದಾಸೋಹಿ ಶರಣಬಸವೇಶ್ವರನಲ್ಲಿ ಬೇಡಿಕೊಂಡರು.

**ಶಿರಹಟ್ಟಿ ಮಂಡಲದ ಬಿಜೆಪಿ ಸದಸ್ಯತಾ ಅಭಿಯಾನದಲ್ಲಿ ಸಂಸದ ಬಸವರಾಜ ಬೊಮ್ಮಾಯಿ**

# ತುಳಿತಕ್ಕೊಳಗಾದ ಸಮುದಾಯಕ್ಕೆ ಅನ್ಯಾಯವಾಗಿದೆ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಪಂಚ ಗ್ಯಾರಂಟಿ ಯೋಜನೆಗಳನ್ನು ನೀಡುವ ಭರವಸೆಯ ಆಧಾರದಲ್ಲಿ ಅಧಿಕಾರಕ್ಕೆ ಬಂದಿದ್ದು, ಈ ಸಂದರ್ಭದಲ್ಲಿ ಎಸ್‌ಸಿ/ಎಸ್‌ಟಿ ಜನಾಂಗದ ಅಭಿವೃದ್ಧಿಯ ಅನುದಾನವನ್ನು ಬಳಸಿ ತುಳಿತಕ್ಕೊಳಗಾದ ಸಮುದಾಯಕ್ಕೆ ಅನ್ಯಾಯ ಮಾಡಿದೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಅವರು ಸೋಮವಾರ ಶಿರಹಟ್ಟಿ ಪಟ್ಟಣದ ಶಾಸಕರ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಶಿರಹಟ್ಟಿ ಮಂಡಲದ ವತಿಯಿಂದ ಹಮ್ಮಿಕೊಂಡಿದ್ದ ಸದಸ್ಯತಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ರಾಜ್ಯದಲ್ಲಿ ದಿನಕ್ಕೊಂದು ಹಗರಣಗಳು ಬಯಲಿಗೆ ಬರುತ್ತಿವೆ. ವಾಲ್ಮೀಕಿ ನಿಗಮದಲ್ಲಿ ರೂ. 189 ಕೋಟಿ ಅವ್ಯವಹಾರ ನಡೆದಿದೆ. ಸ್ವತಃ ಸಿಎಂ ಸಿದ್ದರಾಮಯ್ಯ ಅವರೇ 89 ಕೋಟಿ ಎಂದು ಒಪ್ಪಿಕೊಂಡಿದಾರೆ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಸಂಪೂರ್ಣ ಸ್ಥಗಿತಗೊಂಡಿವೆ. ರಸ್ತೆ ಅಭಿವೃದ್ಧಿಪಡಿಸುವುದು ಹೋಗಲಿ ಗುಂಡಿಗಳಿಗೆ ಹಿಡಿ ಮಣ್ಣು ಹಾಕುತ್ತಿಲ್ಲ. ಗ್ರಾಮೀಣ ಪ್ರದೇಶಗಳಲ್ಲಿ, ಗ್ರಾ.ಪಂ ವ್ಯಾಪ್ತಿಗಳಲ್ಲಿ ಬೀದಿ ದೀಪ ಕೂಡ ಅಳವಡಿಸಿಲ್ಲ. ಇಂಥ ಸ್ಥಿತಿ ರಾಜ್ಯದಲ್ಲಿ ಎಂದಿಗೂ ಬಂದಿರಲಿಲ್ಲ ಎಂದು ದೂರಿದರು.




ಸದ್ಯದ ರಾಜಕೀಯ ಬೆಳವಣಿಗೆ ಗಮನಿಸಿದರೆ ಯಾವುದೇ ಹಂತದಲ್ಲಾದರೂ ಮಧ್ಯಂತರ ಚುನಾವಣೆ ಘೋಷಣೆಯಾಗುತ್ತದೆ. ಸರ್ಕಾರ ಭ್ರಷ್ಟಾಚಾರ, ಅವ್ಯವಹಾರದಲ್ಲಿ ಮುಳುಗಿ ಹೋಗಿದ್ದು, ಸರಳ ರೀತಿಯಲ್ಲಿ ಅಧಿಕಾರ ನಡೆಯಲು ಸಾಧ್ಯವೇ ಇಲ್ಲ ಎಂದು ಮಾರ್ಮಿಕ ಹೇಳಿಕೆ ನೀಡಿದರು.

ಶಿರಹಟ್ಟಿ ಮತಕ್ಷೇತ್ರ ವ್ಯಾಪ್ತಿಯಲ್ಲಿ 250 ಬೂತ್‌ಗಳು ಬರುತ್ತಿದ್ದು, ಎಲ್ಲ ವರ್ಗ, ಎಲ್ಲ ಸಮಾಜ ಹಾಗೂ ಎಲ್ಲ ಸ್ತರದ ಜನರ ಸದಸ್ಯತ್ವ ಆಗಬೇಕು. ಅಂದಾಗ ಮಾತ್ರ ಎಲ್ಲರನ್ನು ಒಳಗೊಂಡಂತೆ ಆಡಳಿತ ನೀಡಲು ಸಾಧ್ಯ, ಪ್ರತಿಯೊಬ್ಬರಿಗೂ ಕೇಂದ್ರ ಸರ್ಕಾರದ ಯೋಜನೆ ದೊರೆಯಲು ಸಾಧ್ಯ ಎಂದು ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿದರು. ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಎಂ.ಎಸ್. ಕರಿಗೌಡರ, ಫಕ್ಕಿರೇಶ ರಟ್ಟಿಹಳ್ಳಿ, ಜಾನು ಲಮಾಣಿ, ತಿಮ್ಮರಡ್ಡಿ ಮರಡ್ಡಿ, ಮೋಹನ್ ಗುತ್ತೆಮ್ಮನವರ, ಚಂದ್ರಕಾಂತ ನೂರಶೆಟ್ಟರ, ಗೂಳಪ್ಪ ಕರಿಗಾರ, ಪ್ರವೀಣ ಪಾಟೀಲ, ಅಕಬರ ಯಾದಗೀರಿ, ರಾಮಣ್ಣ ಕಂಬಳಿ, ಯಲ್ಲಪ್ಪ ಇಂಗಳಗಿ, ನಾಗರಾಜ ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

ಸದ್ಯ ಸಿಎಂ ಕುರ್ಚಿ ಖಾಲಿ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಸಚಿವ ಸಂಪುಟದವರೇ ಬಹಿರಂಗವಾಗಿ ಹೇಳಿಕೆ ನೀಡುತ್ತಿದ್ದಾರೆ. ಮೊದಲಿಗೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರೊಬ್ಬರದ್ದೇ ಕಾಟ ಇತ್ತು. ಆದರೆ ಸಿದ್ದರಾಮಯ್ಯನವರು ನಂಬಿದವರೇ ನಿತ್ಯ ಸಿಎಂ ನಾನೇ ಆಗುತ್ತೇನೆ ಎಂದು ಒಳಗೊಳಗೆ ಕಾಡುತ್ತಿದ್ದಾರೆ. ಸಚಿವ ಸಂಪುಟದ ಮೇಲೆ ವಿಶ್ವಾಸವೇ ಇಲ್ಲದಂತಾಗಿದ್ದು, ಸಿದ್ದರಾಮಯ್ಯನವರಿಗೆ ಈ ಸ್ಥಿತಿ ಎದುರಾಗಿರುವುದನ್ನು ನೋಡಿದರೆ ಕನಿಕರವಾಗುತ್ತದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಲೇವಡಿ ಮಾಡಿದರು.

**ದಸರಾ ದರ್ಬಾರ್ ಪೂರ್ವಭಾವಿ ಸಭೆಯಲ್ಲಿ ರಂಭಾಪುರಿ ಜಗದ್ಗುರುಗಳು**

# ದರ್ಬಾರ್‌ನ ಸಿದ್ಧತೆಗಳು ಭರದಿಂದ ಸಾಗಲಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬರುವ ಅಕ್ಟೋಬರ್ 3ರಿಂದ 12ರವರೆಗೆ ಅಬ್ಬಿಗೆರೆ ಗ್ರಾಮದಲ್ಲಿ ನಡೆಯಲಿರುವ ಶರನ್ನವರಾತ್ರಿ ದಸರಾ ದರ್ಬಾರ್ ಮುಂದೆ ನಡೆಯುವ ಎಲ್ಲ ದರ್ಬಾರ್‌ಗಳಿಗೆ ವಿಶೇಷ ಮಾದರಿಯಾಗಲಿದೆ. ಇಂದಿನ ಈ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡ ನಮಗೆ ಈ ವಿಶ್ವಾಸ ಮೂಡಿದೆ. ಶರನ್ನವರಾತ್ರಿ ದಸರಾ ದರ್ಬಾರ್‌ನ ಎಲ್ಲ ಸಿದ್ಧತೆಗಳೂ ಇಂದಿನಿಂದಲೇ ಭರದಿಂದ ನಡೆಯಲಿ ಎಂದು ರಂಭಾಪುರಿ ಜಗದ್ಗುರು ಶ್ರೀ 1008 ಡಾ. ವೀರ ಸೋಮೇಶ್ವರ ಮಹಾಸ್ವಾಮಿಗಳವರು ಹೇಳಿದರು.

ಸಮೀಪದ ಅಬ್ಬಿಗೆರೆ ಹಿರೇಮಠದಲ್ಲಿ ಜರುಗಿದ ದಸರಾ ದರ್ಬಾರ್ ಪೂರ್ವಭಾವಿ ಸಭೆಯ ದಿವ್ಯ ಸಾನ್ನಿಧ್ಯವನ್ನು ವಹಿಸಿ ಅವರು ಆಶೀರ್ವಚನ ನೀಡಿದರು.

ಅನ್ನ ದಾಸೋಹದಲ್ಲಿ ಅಬ್ಬಿಗೆರೆ ಗ್ರಾಮ ಯಾವಾಗಲೂ ಮುಂದು. ಇದು ಲಿಂ. ಸೋಮಶೇಖರ ಶಿವಾಚಾರ್ಯರ ಕಾಲದಿಂದಲೂ ಪ್ರಸಿದ್ಧಿಯಾದ ಸಂಗತಿ. ಸಮಾಜಕ್ಕೆ ಲಿಂ. ಸೋಮಶೇಖರ ಶಿವಾಚಾರ್ಯರ ಕೊಡುಗೆ ಅಪಾರ. ಭಕ್ತ ವತ್ಸಲರಾಗಿದ್ದ ಅವರು ಎಂದಿಗೂ ಭಕ್ತರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದವರು. ಅವರ ಬಹಳ ದಿನಗಳ ಕನಸು ಬರುವ ಅಕ್ಟೋಬರ್ 3ರಿಂದ ಅಬ್ಬಿಗೆರೆಯಲ್ಲಿ ಸಾಕಾರಗೊಳ್ಳಲಿದೆ. ಅವರ ಸತ್ಯ ಸಂಕಲ್ಪದಂತೆ ಈ ಕಾರ್ಯ ಜರುಗಲಿದ್ದು, ಇದಕ್ಕೆ ರೋಣ ಶಾಸಕ ಜಿ.ಎಸ್. ಪಾಟೀಲರು ಪ್ರೇರಕ ಶಕ್ತಿಯಾಗಿದ್ದಾರೆ ಎಂದರು.

ಸ್ವಾಗತ ಸಮಿತಿಯ ಅಧ್ಯಕ್ಷ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಇದು ಕೇವಲ ಅಬ್ಬಿಗೆರೆಯ ಉತ್ಸವವಾಗದೆ ಜಿಲ್ಲಾ ಉತ್ಸವದಂತೆ ರಾಜ್ಯ ಮಟ್ಟಕ್ಕೆ ಸರಿಸಮನಾದ ಉತ್ಸವವಾಗಬೇಕು. ಅದಕ್ಕಾಗಿ ಎಲ್ಲರೂ ಕಾಯಾ, ವಾಚಾ, ಮನಸ್ಸಿನಿಂದ ದುಡಿದಾಗ ಈ ಉತ್ಸವಕ್ಕೊಂದು ಅರ್ಥ ಬರುತ್ತದೆ. ಉತ್ಸವದ ಯಶಸ್ಸಿಗೆ ಏನೇ ಅನುಕೂಲ ಬೇಕಾದರೂ ಮಾಡಿಕೊಡಲು ನಾನು ಸಿದ್ಧನಿದ್ದೇನೆ. ಎಲ್ಲರೂ ಒಂದಾಗಿ, ಒಮ್ಮನದಿಂದ ಈ ದಸರಾ ದರ್ಬಾರ್ ಕಾರ್ಯಕ್ರಮವನ್ನು ನ ಭೂತೋ ನ ಭವಿಷ್ಯತಿ ಎನ್ನುವಂತೆ ಯಶಸ್ವಿ ಮಾಡೋಣ ಎಂದರು.

### ಭೂಮಿ ಪೂಜೆ


ಪೂರ್ವಭಾವಿ ಸಭೆಯ ನಂತರ ದಸರಾ ದರ್ಬಾರ್ ನಡೆಯಲಿರುವ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಮೈದಾನದಲ್ಲಿ ಬೃಹತ್ ಪೆಂಡಾಲ್ ಹಾಕುವ ಸ್ಥಳದಲ್ಲಿ ಜಗದ್ಗುರುಗಳು ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಗದ್ಗುರುಗಳು, ಈ ಸ್ಥಳ ತುಂಬಾ ಪ್ರಶಸ್ತವಾಗಿದ್ದು, ವಿಶಾಲವಾಗಿದೆ. ಇಂತಹ ಉತ್ತಮ ಸ್ಥಳವನ್ನು ಆಯ್ಕೆ ಮಾಡಿರುವ ಸ್ವಾಗತ ಸಮಿತಿಯವರನ್ನು ತಾವು ಆಶೀರ್ವದಿಸುವದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಎಲ್ಲ ಶ್ರೀಗಳು, ಸ್ವಾಗತ ಸಮಿತಿಯ ಅಧ್ಯಕ್ಷ ಜಿ.ಎಸ್. ಪಾಟೀಲ ಸೇರಿದಂತೆ ಅನೇಕ ಗಣ್ಯಮಾನ್ಯರು ಪಾಲ್ಗೊಂಡಿದ್ದರು.

ಸಿದ್ದರ ಬೆಟ್ಟದ ಶ್ರೀಗಳು, ಶರನ್ನವರಾತ್ರಿ ಉತ್ಸವದ ಅಧ್ವರ್ಯುಗಳಾದ ಷ.ಬ್ರ. ಶ್ರೀ ವೀರಭದ್ರ ಶಿವಾಚಾರ್ಯ ಶ್ರೀಗಳು ಪ್ರಾಸ್ತಾವಿಕವಾಗಿ ಮಾತನಾಡಿ, ಈ ಶ್ರೀಮಠದ ಹಿಂದಿನ ಶ್ರೀಗಳವರ ಕನಸು ಕೈಗೂಡುವ ಕಾಲ ಈಗ ಬಂದಿದೆ. ಅವರ ಕನಸನ್ನು ನನಸು ಮಾಡಲು ಅಬ್ಬಿಗೆರೆಯ ಪ್ರತಿಯೊಬ್ಬರೂ ಸ್ಪಂದಿಸುತ್ತಿರುವುದು ವಿಶೇಷ ಉತ್ಸಾಹವನ್ನು ಮೂಡಿಸಿದೆ. 2005ರಲ್ಲಿ ಶ್ರೀಶೈಲ ಜಗದ್ಗುರುಗಳ ಶರನ್ನವರಾತ್ರಿ ಉತ್ಸವವನ್ನು ಆಚರಿಸಿದ ಅನುಭವ ಅಬ್ಬಿಗೆರೆ ಗ್ರಾಮದ ಮಹಾ ಜನತೆಗಿದೆ. ಆದ್ದರಿಂದ ಈ ಉತ್ಸವವೂ ಸಹ ಯಾವ ಅಡತಡೆಯಿಲ್ಲದೆ ಸಾಂಗವಾಗಿ ಸಂಭ್ರಮದಿಂದ ಎಲ್ಲ ಭಕ್ತರ ಸಹಕಾರದಿಂದ ಜರುಗಲಿದೆ ಎಂದರು.

ಸಭೆಯನ್ನುದ್ದೇಶಿಸಿ ಸೂಡಿಯ ಷ.ಬ್ರ. ಶ್ರೀ ಕೊಟ್ಟೂರು ಶಿವಾಚಾರ್ಯರು, ಮುಕ್ತಿ ಮಂದಿರದ ಷ.ಬ್ರ. ಶ್ರೀ ವಿಮಲರೇಣುಕ ಮುಕ್ತಿ ಮುನಿಗಳು ಇನ್ನೂ ಅನೇಕ ಹರ-ಗುರು-ಚರ ಮೂರ್ತಿಗಳು ಮಾತನಾಡಿದರು. ವೇದಿಕೆಯ ಮೇಲೆ ಹಂಪಸಾಗರ ಶ್ರೀಗಳು, ನರೇಗಲ್ಲ ಹಿರೇಮಠದ ಶ್ರೀಗಳು, ಸಂಗೊಳ್ಳಿಯ ಶ್ರೀಗಳು, ಅಬ್ಬಿಗೆರೆಯ ಯಲ್ಲಾಲಿಂಗೇಶ್ವರರು ಇನ್ನೂ ಮುಂತಾದ ಶ್ರೀಗಳವರು, ಧುರೀಣರಾದ ಆಯ್.ಎಸ್. ಪಾಟೀಲ, ವೀರೇಶ ಕೂಗು, ಚಂದ್ರು ಬಾಳಿಹಳ್ಳಿಮಠ, ಡಾ. ಆರ್.ಬಿ. ಬಸವರಡ್ಡೇರ, ಡಾ. ಆರ್.ಕೆ. ಗಚ್ಚಿನಮಠ, ಸಂಗಯ್ಯ ರಾಟಿಮನಿ ಇನ್ನೂ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯಾದ್ಯಂತ ಅನೇಕ ಗ್ರಾಮಗಳ ಗಣ್ಯರು, ಸಾರ್ವಜನಿಕರು ಪಾಲ್ಗೊಂಡಿದ್ದರು. ಶ್ರೀಪೀಠದ ಗಂಗಾಧರ ಶಾಸ್ತ್ರಿಗಳು ಪ್ರಾರ್ಥಿಸಿದರು. ಶಿಕ್ಷಕ ಮಲ್ಲಿಕಾರ್ಜುನ ಗುಗ್ಗರಿ ಸ್ವಾಗತಿಸಿದರು. ಬಸವರಾಜ ವೀರಾಪೂರ ನಿರೂಪಿಸಿ, ವಂದಿಸಿದರು.

# ಪ.ಪಂ ಅಧ್ಯಕ್ಷ: ಉಪಾಧ್ಯಕ್ಷರ ಅವಿರೋಧ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಇಲ್ಲಿನ ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಎರಡನೇ ಅವಧಿಯ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಯಲ್ಲವ್ವ ಕವಲೂರ, ಉಪಾಧ್ಯಕ್ಷರಾಗಿ ಅನೂಸೂಯಾ ಸೋಮಗೇರಿ ಅವಿರೋಧವಾಗಿ ಆಯ್ಕೆ ಯಾದರು.

ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಂದೊಂದೇ ನಾಮಪತ್ರ ಸಲ್ಲಿಕೆಯಾದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಯಾದ ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ ಅವಿರೋಧ ಆಯ್ಕೆ ಘೋಷಿಸಿದರು.

ಪ.ಪಂನಲ್ಲಿ ಒಟ್ಟೂ 19 ಸದಸ್ಯರಿದ್ದು, 15 ಸದಸ್ಯರು ಕಾಂಗ್ರೆಸ್, ಒರ್ವ ಪಕ್ಷೇತರ, 3 ಬಿಜೆಪಿ ಸದಸ್ಯರಿದ್ದಾರೆ. ಎರಡನೇ ಅವಧಿಯ ಮೀಸಲಾತಿ ಅಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಮಹಿಳೆ, ಉಪಾಧ್ಯಕ್ಷ ಎಸ್‌ಸಿ ಮಹಿಳೆ ಮೀಸಲಾಗಿತ್ತು. ಕಾಂಗ್ರೆಸ್‌ನಲ್ಲಿ ಎಸ್‌ಸಿ ಮಹಿಳೆ ಇಲ್ಲದ ಕಾರಣ ಉಪಾಧ್ಯಕ್ಷ ಸ್ಥಾನವೂ ಬಿಜೆಪಿ ಪಾಲಾಗಿದ್ದು, ಅಧ್ಯಕ್ಷ ಸ್ಥಾನಕ್ಕೆ ಒಮ್ಮತದ ಅಭ್ಯಾರ್ಥಿಯಾಗಿ ಯಲ್ಲವ್ವ ಕವಲೂರ, ಉಪಾಧ್ಯಕ್ಷರಾಗಿ ಅನುಸೂಯಾ ಸೊಮಗೇರಿ ಆಯ್ಕೆಯಾಗಿರುವುದನ್ನು ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ ಪ್ರಕಟಿಸುತ್ತಿದ್ದಂತೆ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಚಿದರ್ಭದಲ್ಲಿ ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ ಮಾತನಾಡಿ, ಮುಳಗುಂದ ಪ.ಪಂ ಸದಸ್ಯರು ಚುನಾವಣೆ ಸಂದರ್ಭದಲ್ಲಿ ಮಾತ್ರ ತಮ್ಮ ತಮ್ಮ ಪಕ್ಷಕ್ಕಾಗಿ ಕೆಲಸ ಮಾಡುತ್ತಿದ್ದು, ಚುನಾವಣೆ ಮುಗಿದ ನಂತರ ಎಲ್ಲಾ ಪಕ್ಷದ ಸದಸ್ಯರು ಸೇರಿ ಪಟ್ಟಣದ ಅಭಿವೃದ್ಧಿಗಾಗಿ ಕೆಲಸ ಮಾಡಲು ಕೈ ಜೊಡಿಸುತ್ತಾ ಬಂದಿದ್ದಾರೆ ಎಂದರು.

ಕಾಂಗ್ರೆಸ್ ಮುಖಂಡರಾದ ಎಂ.ಡಿ. ಬಟ್ಟೂರ, ಪಿ.ಎ. ವಂಟಕರ, ಸೈಯದಲಿ ಶೇಖ್, ಪ.ಪಂ ಸದಸ್ಯರಾದ ಕೆ.ಎಲ್. ಕರಿಗೌಡರ, ಎಸ್.ಸಿ. ಬಡ್ನಿ, ಇಮ್ಮಣ್ಣಾ ಶೇಖ್, ಮಾಹಾಂತೇಶ ನೀಲಗುಂದ, ಮಾಹಾದೇವಪ್ಪ ಗಡಾದ, ನಾಗರಾಜ ದೇಶಪಾಂಡೆ, ವಿಜಯ ನೀಲಗುಂದ, ಪಾರವ್ವ ಅಳ್ಳಣ್ಣವರ, ಚಂಪಾವತಿ ಗುಳೇದ, ಬಸವರಾಜ ಹಾರೋಗೇರಿ, ದ್ಯಾಮಣ್ಣಾ ನೀಲಗುಂದ, ಲಕ್ಷ್ಮವ್ವ ಕುಂದಗೋಳ ಸೇರಿದಂತೆ ಕಾಂಗ್ರೆಸ್ ಮುಂಖಡರು, ಬಿಜೆಪಿ ಮುಖಂಡರು ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

**ತಾಯಂದಿರ ಸಭೆಯಲ್ಲಿ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ**

# ಮಕ್ಕಳ ಅಭ್ಯುದಯದಲ್ಲಿ ತಾಯಂದಿರ ಪಾತ್ರವಿದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳು ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕಾದರೆ ಅವರು ಎಲ್ಲ ವಿಷಯಗಳಲ್ಲಿಯೂ ಪರಿಣಿತರಾಗಿರಬೇಕು. ಹೀಗೆ ಅವರು ಪರಿಣಿತಿ ಸಾಧಿಸುವಲ್ಲಿ ಶಿಕ್ಷಕರ ಪಾತ್ರ ಎಷ್ಟಿದೆಯೋ ಅಷ್ಟೇ ಪಾತ್ರ ಅವರ ತಾಯಂದಿರದ್ದೂ ಇದೆ. ಆದ್ದರಿಂದ ಮಕ್ಕಳ ಅಭ್ಯುದಯದಲ್ಲಿ ತಾಯಂದಿರ ಪಾತ್ರ ಹಿರಿದಾಗಿದೆ ಎಂದು ಶ್ರೀ ಅನ್ನದಾನ ವಿಜಯ ಬಾಲಿಕೆಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಿಕೆಯರ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಹಿನ್ನೆಲೆಯಲ್ಲಿ ಈಚೆಗೆ ನಡೆದ ತಾಯಂದಿರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಶಾಲೆಯಲ್ಲಿರುವದಕ್ಕಿಂತ ಹೆಚ್ಚಿನ ಸಮಯ ಮಕ್ಕಳು ಮನೆಯಲ್ಲಿ ನಿಮ್ಮ ಜೊತೆಗೆ ಇರುತ್ತಾರೆ. ಈ ಸಮಯದಲ್ಲಿ ಅವರ ವಿದಾಭ್ಯಾಸಕ್ಕೆ ಯಾವ ತೊಂದರೆಯೂ ಆಗದಂತೆ ಗಮನ ಹರಿಸಬೇಕಿರುವುದು ನಿಮ್ಮ ಆದ್ಯ ಕರ್ತವ್ಯವಾಗಿದೆ. ಅವರನ್ನು ಹೆಚ್ಚಾಗಿ ಮನೆ ಕೆಲಸಗಳಿಗೆ ತೊಡಗಿಸದೆ ಅವರು ಚೆನ್ನಾಗಿ ಅಭ್ಯಾಸದಲ್ಲಿ ತೊಡಗಿಕೊಳ್ಳುವಂತೆ ನೀವು ನಿಗಾ ವಹಿಸಬೇಕು. ಇದರ ಜೊತಗೆ ಅವರ ಆರೋಗ್ಯದ ಕಡೆಗೂ ಗಮನ ನೀಡಿ ನಿಮ್ಮ ಮಕ್ಕಳು ಮುಂಬರುವ ಪರೀಕ್ಷೆಯಲ್ಲಿ ಉತ್ತಮ ರೀತಿಯಿಂದ ಪಾಸಾಗುವಂತೆ ಸಹಕರಿಸುವ ಜವಾಬ್ದಾರಿ ನಿಮ್ಮ ಮೇಲಿದೆ ಎಂದು ತಿಳಿಸಿದರು.




ಶಾಲಾ ಆಡಳಿತ ಮಂಡಳಿಯ ಚೇರಮನ್ ವೀರಣ್ಣ ಹಳ್ಳಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಶಿಕ್ಷಕ ಎ.ಟಿ. ಮಳ್ಳೊಳ್ಳಿ ಸ್ವಾಗತಿಸಿದರು. ಶಿಕ್ಷಕ ಬಿ.ಡಿ. ಯರಗೊಪ್ಪ ನಿರೂಪಿಸಿದರು. ಪಾಲಕರ ಪ್ರತಿನಿಧಿ ಮಂಜುಳಾ ಸಂಗನಾಳ, ಶಿಕ್ಷಕಿ ಎಸ್. ಎಫ್. ಧರ್ಮಾಯತ, ಶಿಕ್ಷಕ ಎಂ.ಎಸ್. ಅತ್ತಾರ, ಎಸ್. ಶಿವಮೂರ್ತಿ, ದೈಹಿಕ ಶಿಕ್ಷಕ ಕೆ.ಸಿ. ಜೋಗಿ, ಶಿಕ್ಷಕಿ ಆರ್.ಎಂ. ಗುಳಬಾಳ ವೇದಿಕೆಯ ಮೇಲಿದ್ದರು.

ಶಾಲೆಯ ಹಾಗೂ ನಿಮ್ಮ ಮನೆತನದ ಕೀರ್ತಿಯನ್ನು ಹೆಚ್ಚಿಸುವ ಜವಾಬ್ದಾರಿ ನಿಮ್ಮ ಮಕ್ಕಳ ಮೇಲಿದೆ. ಕಳೆದ ಸಾರೆಯ ಪರೀಕ್ಷೆಯಲ್ಲಿ ನಮ್ಮ ಶಾಲೆಯ ಫಲಿತಾಂಶ ನೂರಕ್ಕೆ ನೂರು ಆಗಿದೆ. ಈ ಸಾರೆಯೂ ನಾವು ಅದನ್ನೇ ಬಯಸುತ್ತೇವೆ. ಅದಕ್ಕಾಗಿ ಮಕ್ಕಳ ಪರಿಶ್ರಮ ಮತ್ತು ನಿರಂತರ ಅಧ್ಯಯನ ಅವಶ್ಯಕ ಎಂದು ತಿಳಿಸಿದ ಹೂಲಗೇರಿ, ಅಂತಹ ವಾತಾವರಣವನ್ನು ಮನೆಯಲ್ಲಿ ನೀವುಗಳು ಮಕ್ಕಳಿಗೆ ಒದಗಿಸಿಕೊಡಬೇಕೆಂದರು.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2024-25/673 ದಿನಾಂಕ: 05-09-2024

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ನಿರಜ ತಂದೆ ಪರಶುರಾಮ ಪಿಸೆ , ಶ್ರೀ ಗುರುಪ್ರಸಾದ ಬಸವರಾಜ ಹೆರಕಲ್ಲ, ಶ್ರೀಮತಿ ಲಲಿತಾ ಕೋಂ ಚಂದ್ರಶೇಖರಪ್ಪ ಕರುಗಲ್ಲ ಹಾಗೂ ಶ್ರೀ ಬಸವರಾಜ ತಂದೆ ಚಂದ್ರಶೇಖರಪ್ಪ ಕರುಗಲ್ಲ ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ಕಳಸಾಪೂರ | 13/*/5<br>13/*/6 | 03ಎಕರೆ-32 ಗುಂಟೆ<br>03ಎಕರೆ-32 ಗುಂಟೆ<br>ಒಟ್ಟು ಕ್ಷೇತ್ರ: 07ಎಕರೆ-24ಗುಂ | ಕೃಷಿ ವಲಯ | ವಸತಿ |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ
ಗದಗ-ಬೆಟಗೇರಿ

ವಾ.ಸಾ.ಇ/ಗದಗ/199/ದೇಶಪಾಂಡೆಪಬ್ಲಿಸಿಟಿ/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka